# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –244 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 20–04–2025 ಭಾನುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 244 | RNI No: KARKAN/2023/88462 | KA/SK/CTA-874/2024-2026 | Chitradurga | Date: 20-04-2025 Sunday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕಾಲುಬಾಯಿ ಲಸಿಕಾ ಅಭಿಯಾನ ಯಶಸ್ವಿಗೊಳಿಸಿ: ಎಡಿಸಿ 2

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮವಹಿಸಿ 3

ವ್ಯಕ್ತಿಯ ಘನತೆ, ಗೌರವ ಸಂರಕ್ಷಣೆ ಮಾಡುವ ನೇಕಾರರ ಕಾರ್ಯ ಸ್ಮರಣೆಯ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಏ.21 ರಂದು ವಿವಿಧ ಜಯಂತಿಗಳ ಪೂರ್ವ ಸಭೆ

» ಚಿತ್ರದುರ್ಗ

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಏ.21 ರಂದು ವಿವಿಧ ಜಯಂತಿಗಳ ಆಚರಣೆ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಗಳು ಜರುಗಲಿವೆ. ಬೆಳಿಗ್ಗೆ 11 ಗಂಟೆಗೆ ಶ್ರೀ ಬಸವ ಜಯಂತಿ, 11:30 ಗಂಟೆಗೆ ಶ್ರೀ ಶಂಕರಾಚಾರ್ಯರರ ಜಯಂತಿ ಹಾಗೂ ಮಧ್ಯಾಹ್ನ 12 ಗಂಟೆಗೆ ಶ್ರೀ ಭಗೀರಥ ಜಯಂತಿ ಆಚರಿಸುವ ಕುರಿತು ಪೂರ್ವಭಾವಿ ಸಭೆಗಳು ನಡೆಯಲಿದೆ. ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರುಗಳು ತಪ್ಪದೇ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ, ಜಯಂತಿಗಳ ಆಚರಣೆ ಕುರಿತು ಸೂಕ್ತ ಸಲಹೆ ಸೂಚನೆಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» ಚಿತ್ರದುರ್ಗ

ಚಿತ್ರದುರ್ಗ ಪಶುಪಾಲನ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಏಪ್ರಿಲ್ 28 ಹಾಗೂ 29 ರಂದು "ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ" ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನಗರದ ಪಾಲಿಕ್ಲಿನಿಕ್ ಆವರಣದಲ್ಲಿರುವ ಪಶುಪಾಲನ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ತರಬೇತಿ ನಡೆಯಲಿದ್ದು, 25 ಜನರಿಗೆ ತರಬೇತಿ ನೀಡಲಾಗುವುದು. ಆಸಕ್ತ ರೈತರು ಆಧಾರ್ ಕಾರ್ಡ್ ಪ್ರತಿ, 3 ಪಾಸ್ ಪೋರ್ಟಸೈಜ್ ಫೋಟೋ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ಪ.ಜಾತಿ ಮತ್ತು ಪ.ಪಂಗಡದವರು ಜಾತಿ ಪ್ರಮಾಣ ಪತ್ರದ ಪ್ರತಿದೊಂದಿಗೆ ನೊಂದಾಯಿಸಿಕೊಳ್ಳಬಹುದು. ತರಬೇತಿ ವೇಳೆ ಯಾವುದೇ ಪ್ರೋತ್ಸಾಹಧನ ನೀಡುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಮೊಬೈಲ್ ಸಂಖ್ಯೆ 9482943111, 9886002248 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

### ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಹಿರಿಯೂರು ನಗರದ ಟಿ.ಬಿ.ಸರ್ಕಲ್ ನಿಂದ ತಾಲ್ಲೂಕು ಕಚೇರಿವರೆಗಿನ ರಸ್ತೆ ಅಗಲೀಕರಣ ಕಾಮಗಾರಿ ನಿಮಿತ್ತ ಏಪ್ರಿಲ್ 20 ಭಾನುವಾರದಂದು ಬೆಳಿಗ್ಗೆ 10 ಗಂಟೆಯಿಂದ 6 ಗಂಟೆವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಹಿರಿಯೂರಿನ ಅವಧಾನಿನಗರ, ತಾಲ್ಲೂಕು ಕಚೇರಿ, ಆಜಾದ್ ನಗರ, ಚಿಕ್ಕಪೇಟೆ, ತೇರುಮಲ್ಲೇಶ್ವರ ದೇವಸ್ಥಾನದ, ಗಾಂಧಿ ವೃತ್ತ, ಹುಳಿಯಾರು ರಸ್ತೆ, ಹರಿಶ್ಚಂದ್ರ ಘಾಟ್, ಲಕ್ಕವನಹಳ್ಳಿ, ದೊಡ್ಡಘಟ್ಟ, ಸೀಗೇಹಟ್ಟಿ, ಕೂನಿಕೆರೆ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ಅಡಚಣೆ ಉಂಟಾಗಲಿದೆ. ಗ್ರಾಹಕರು ಸಹರಿಸುವಂತೆ ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರತಿಷ್ಠಿತ ಶಾಲಾ ಪ್ರವೇಶಾತಿಗೆ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಪ್ರತಿಭಾವಂತ ಪರಿಶಿಷ್ಟ ಪಂಗಡದವಿದ್ಯಾರ್ಥಿಗಳಸೇರ್ಪಡೆಯೋಜನೆಯಡಿ ಪ್ರತಿಷ್ಠಿತ ಖಾಸಗಿ ಶಾಲೆ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಮೇ 3 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ

ಪ್ರವೇಶ ಬಯಸುವ ಅಭ್ಯರ್ಥಿಯು 5ನೇ ತರಗತಿಯಲ್ಲಿ ಶೇ.60% ಕ್ಕಿಂತ ಹೆಚ್ಚು ಅಂಕ ಪಡೆದಿರಬೇಕು. ಪೋಷಕರ ವಾರ್ಷಿಕ ವರಮಾನ ರೂ.2 ಲಕ್ಷ ಮೀರಿರಬಾರದು. ನಿಗಧಿತ ನಮೂನೆಯ ಅರ್ಜಿಯೊಂದಿಗೆ ದೃಢೀಕರಿಸಿದ ಅಗತ್ಯ ಪ್ರಮಾಣ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು. ಅರ್ಹ ಪರಿಶಿಷ್ಟ ವರ್ಗದ ಅಭ್ಯರ್ಥಿಗಳು ಆಯಾ ತಾಲ್ಲೂಕಿನ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಸಹಾಯಕ ನಿರ್ದೇಶಕ ಅಥವಾ ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಜಿಲ್ಲಾಢಳಿತ ಭವನ, ಕೊಠಡಿ ಸಂಖ್ಯೆ 45 ರಲ್ಲಿನ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಮೇ 3ರೊಳಗೆ ಸಲ್ಲಿಸಲು ಸೂಚಿಸಿದೆ.

---

ಹಿಂದೆ ಸಂಸ್ಕೃತ ಕಲಿಯುವವರಿಗೆ ಕಾದ ಸೀಸದ ಶಿಕ್ಷೆ ಇತ್ತು –ಆದರೆ ನಮಗೀಗ ಶಿಕ್ಷಣ ಸಿಕ್ಕಿದೆ –ಅನುಭವಗಳನ್ನು ದಾಖಲಿಸಿ –ಪ್ರತಿಭೆ ಯಾರೊಬ್ಬರ ಸ್ವತ್ತು ಅಲ್ಲ: ಸಿ.ಎಂ ಸಿದ್ದರಾಮಯ್ಯ ಕರೆ

# ನಮ್ಮ ಜ್ಞಾನ ಕರ್ಮ ಸಿದ್ಧಾಂತ ದಿಕ್ಕರಿಸುವ ವೈಜ್ಞಾನಿಕವಾಗಿ, ವೈಚಾರಿಕವಾಗಿ ಇರಬೇಕು

**ಶೂದ್ರರು ವಿದ್ಯಾವಂತರಾಗಿ ಏನಾದರೂ ಬರೆದರೆ ಅವರ ಬಗ್ಗೆ ಕತೆ ಕಟ್ಟಿ ಬಿಡ್ತಾರೆ ಹುಷಾರು: ಕಾಳಿದಾಸ, ವಾಲ್ಮೀಕಿ ಪ್ರಸಂಗ ಉದಾಹರಿಸಿ ಎಚ್ಚರಿಸಿದ ಸಿಎಂ**

» ತುಮಕೂರು

ಹಿಂದೆ ಸಂಸ್ಕೃತ ಕಲಿಯುವವರಿಗೆ, ಶಿಕ್ಷಣ ಕಲಿಯುವ ಇತರರಿಗೆ ಕಾದ ಸೀಸದ ಶಿಕ್ಷೆ ಇತ್ತು. ಆದರೆ ನಮಗೀಗ ಶಿಕ್ಷಣ ಸಿಕ್ಕಿದೆ. ಅನುಭವಗಳನ್ನು ದಾಖಲಿಸಿ. ಪ್ರತಿಭೆ ಯಾರೊಬ್ಬರ ಸ್ವತ್ತು ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಪ್ರಜಾ ಪ್ರಗತಿ ಪತ್ರಿಕೆ, ಕುರುಬ ಸಾಂಸ್ಕೃತಿಕ ಪರಿಷತ್ ಹಾಗೂ ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಡೆದ ಕುರುಬ ಸಮಾಜದ ಸಾಂಸ್ಕೃತಿಕ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ, ಕುರುಬ ಸಮುದಾಯದ ಸಂಸ್ಕೃತಿ ದರ್ಶನ ಮಾಲೆಯ 31 ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ನಮ್ಮ ಜ್ಞಾನ ತಿಳಿವಳಿಕೆಯಲ್ಲಿ ಸ್ಪಷ್ಟತೆ ಇರಬೇಕು. ಕರ್ಮ ಸಿದ್ಧಾಂತವನ್ನು ದಿಕ್ಕರಿಸುವ ವೈಜ್ಞಾನಿಕವಾಗಿ, ವೈಚಾರಿಕವಾಗಿ ಇರಬೇಕು.ಆಗಮಾತ್ರಗುಲಾಮಗಿರಿಯಿಂದ ಹೊರಗೆ ಬರಬಹುದು. ಸತ್ಯ ಹೇಳುವ ಚಾತಿ ಬೆಳೆಸಿಕೊಳ್ಳಬಹುದು ಎಂದರು.

ಕಾಳಿದಾಸನ ನಾಲಗೆ ಮೇಲೆ ಬ್ರಹ್ಮ ಅಕ್ಷರ ಬರೆದದ್ದಕ್ಕೆ ಮಹಾ ಸಾಹಿತಿಯಾದ ಎನ್ನುವ ಮಾತನ್ನೆಲ್ಲಾ ನಂಬಬೇಡಿ. ವಾಲ್ಮೀಕಿ ದರೋಡೆಕೋರ ಆಗಿದ್ದ ಅನ್ನುವುದನ್ನೆಲ್ಲಾ ನಂಬಬೇಡಿ. ಶೂದ್ರರು ವಿದ್ಯಾವಂತರಾಗಿ ಏನಾದರೂ ಮಹತ್ವವಾದದ್ದನ್ನು ಬರೆದರೆ ಅವರ ಬಗ್ಗೆ ಇಂಥಾ ಕತೆಗಳನ್ನು ಕಟ್ಟಿ ಬಿಡ್ತಾರೆ ಹುಷಾರು ಎಂದು ಎಚ್ಚರಿಸಿದರು.

ಬಸವಣ್ಣ 850 ವರ್ಷಗಳ ಹಿಂದೆಯೇ ಅನುಭವ ಮಂಟಪ ರಚಿಸಿ ಸಮ ಸಮಾಜ ನಿರ್ಮಾಣಕ್ಕೆ ಮುನ್ನುಡಿ ಬರೆದಿದ್ದರು. ಪ್ರಗತಿಪರ ವಿಚಾರಗಳನ್ನು ಇಟ್ಟುಕೊಂಡವರಿಗೆ ನಿರಂತರವಾಗಿ ಸಮಸ್ಯೆ ಬರುತ್ತಲೇ ಇರುತ್ತವೆ. ಹೀಗಾಗಿ ಪ್ರಗತಿಪರ ವಿಚಾರಗಳ ಜೊತೆ ನೀವು ಸದಾ ಗಟ್ಟಿಯಾಗಿ ನಿಲ್ಲಬೇಕು. ಪ್ರಗತಿಪರ ವಿಚಾರಗಳ ಜೊತೆಗೆ ನಾವು ನಿಲ್ಲದೆ ಸಮ ಸಮಾಜ ಬರಬೇಕು ಎಂದರೆ ಸಾಧ್ಯವಿಲ್ಲ ಎಂದು ವಿವರಿಸಿದರು.



ಮುಖ್ಯಮಂತ್ರಿಗಳ ಭಾಷಣದ ಇತರೆ ಹೈಲೈಟ್ಸ್...

- **ಜಾತಿಗೆ ಚಲನ ಇಲ್ಲ. ವರ್ಗಕ್ಕೆ ಚಲನೆ ಇಲ್ಲ. ಜಾತಿ ವ್ಯವಸ್ಥೆ ನಿಂತ ನೀರು. ಚಲನೆ ಇಲ್ಲ. ಆರ್ಥಿಕ ಚಲನೆ ಸಿಕ್ಕಾಗ ಮಾತ್ರ ಜಾತಿಯಲ್ಲೂ ಚಲನೆ ಸಿಗುತ್ತದೆ. ಈ ಚಲನೆ ಸಿಗಬೇಕಾದರೆ ಶಿಕ್ಷಣದ ಅಗತ್ಯ ಇದೆ ಎಂದರು.**
- **ಜಾತಿ ಮುಕ್ತ ಮಾನವೀಯ ಸಮಾಜ ನಿರ್ಮಾಣ ನಮ್ಮ ಸಂವಿಧಾನದ ಆಶಯ ಮತ್ತು ಬದ್ಧತೆ. ಆದರೆ ಇವತ್ತಿಗೂ ಅಸ್ಪೃಶ್ಯತೆ ಹೋಗಿಲ್ಲದಿರುವುದು, ಶೈಕ್ಷಣಿಕ ಸಮಾನತೆ ಇಲ್ಲದಿರುವುದು ಬೇಸರದ ಸಂಗತಿ.**
- **ನಾನು ಶಿಕ್ಷಣ ಪಡೆದಿರುವುದು ನನ್ನ ಸ್ವಾರ್ಥಕ್ಕೆ ಅಲ್ಲ. ಅವಕಾಶ ವಂಚಿತ ಸಮುದಾಯಗಳ ಬಿಡುಗಡೆಗಾಗಿ ವಿದ್ಯೆ ಸಂಪಾದನೆ ಮಾಡಿದ್ದೇನೆ ಎನ್ನುವ ಅಂಬೇಡ್ಕರ್ ಅವರ ಮಾತನ್ನು ಅರ್ಥ ಮಾಡಿಕೊಳ್ಳಬೇಕು.**
- **ಸಂವಿಧಾನ ಬರದೇ ಇದ್ದರೆ ನಾವು, ನೀವು ಶಿಕ್ಷಣ ಪಡೆಯಲು ಸಾಧ್ಯವಿರಲಿಲ್ಲ.**
- **ಮನುಸ್ಮೃತಿ ಕಾರಣದಿಂದ ಜಾತಿ ಅಸಮಾನತೆ, ಜಾತಿ ಶೋಷಣೆ, ಜಾತಿ ದೌರ್ಜನ್ಯ ಹೆಚ್ಚಾಯಿತು**
- **ಪಟ್ಟಭದ್ರರು ಹಿಂದಿನ ಜನ್ಮದ ಕರ್ಮ ಎಂದು ನಂಬಿಸಿ ಜನರನ್ನು ವಂಚಿಸುತ್ತಿದ್ದಾರೆ. ಅದಕ್ಕೇ ಬಸವಣ್ಣನವರು ಕರ್ಮ ಸಿದ್ಧಾಂತವನ್ನು ತಿರಸ್ಕರಿಸಿದರು. ನಿಮ್ಮಲ್ಲಿ ಎಷ್ಟು ಜನ ಕರ್ಮ ಸಿದ್ಧಾಂತ ತಿರಸ್ಕರಿಸಿದ್ದೀರೋ ಗೊತ್ತಿಲ್ಲ.**
- **ಬ್ರಹ್ಮ ಒಬ್ಬರಿಗೆ ಶಿಕ್ಷಣ, ಮತ್ತೊಬ್ಬರಿಗೆ ಅನಕ್ಷರತೆ ಸಿಗಲಿ ಅಂತ ಬರೆದರಾ? ಒಬ್ಬನಿಗೆ ಬಡವನಾಗು, ಮತ್ತೊಬ್ಬನಿಗೆ ಶ್ರೀಮಂತನಾಗು ಅಂತ ಬ್ರಹ್ಮ ಬರೆದರಾ ? ಒಬ್ಬ ಹೊಟ್ಟೆತುಂಬ ಉಣ್ಣಬೇಕು, ಉಳಿದವರು ಹಸಿವಿನಿಂದ ಬಿದ್ದಿರಬೇಕು ಎಂದು ಬ್ರಹ್ಮ ಬರೆದುಬಿಟ್ಟರಾ ಎಂದು ಪ್ರಶ್ನಿಸಿದರು.**
- **ಪಟ್ಟಭದ್ರರು ಬಸವಣ್ಣನವರ ಕ್ರಾಂತಿ ಮುಂದುವರೆಸಲು ಬಿಡಲಿಲ್ಲ. ಆದ್ದರಿಂದ ನಾವು ವೈಜ್ಞಾನಿಕವಾಗಿ, ವೈಚಾರಿಕವಾಗಿ ಚಿಂತಿಸುವುದು ಅಗತ್ಯ***
- **ಅಹಿಂದ ಸಮಾಜ ಮತ್ತು ಎಲ್ಲಾ ಜಾತಿ, ಧರ್ಮಗಳ ಬಡತನ, ಹಸಿವು ನಿವಾರಣೆ ಆಗಬೇಕು. ಅನ್ನಕ್ಕಾಗಿ ಯಾರೂ ಇನ್ನೊಬ್ಬರ ಮನೆ ಬಾಗಿಲಿಗೆ ಹೋಗಿ ನಿಲ್ಲಬಾರದು ಎನ್ನುವ ಕಾರಣದಿಂದ ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತಂದೆ ಎಂದು ಸ್ಮರಿಸಿದರು.**
- **ಕಾಯಕ, ದಾಸೋಹ ಬಸವಣ್ಣನವರ ತತ್ವ. ಇದನ್ನು ಎಲ್ಲರೂ ಪಾಲಿಸಬೇಕು ಎಂದರು.**
- **ಎಲ್ಲಾ ಶ್ರಮಿಕ ವರ್ಗಗಳ ಸಂಸ್ಕೃತಿ, ಆಚಾರ, ವಿಚಾರ ಹೊರಗೆ ಬರಬೇಕು. ಇದಕ್ಕಾಗಿ ಎಲ್ಲರೂ ಸಾಹಿತ್ಯ ರಚನೆಯಲ್ಲಿ ತೊಡಗೇಕು ಎಂದರು.**
- **ಹಿಂದೆ ಸಂಸ್ಕೃತ ಕಲಿಯುವವರಿಗೆ ಕಾದ ಸೀಸದ ಶಿಕ್ಷೆ ನಿಗಧಿಯಾಗಿತ್ತು. ಆದರೆ ಈಗ ಶಿಕ್ಷಣ ಸಿಕ್ಕಿದೆ. ನಿಮ್ಮ ನಿಮ್ಮಅನುಭವಗಳನ್ನು ದಾಖಲಿಸಿ. ಪ್ರತಿಭೆ ಯಾರೊಬ್ಬರ ಸ್ವತ್ತು ಅಲ್ಲ. ನಮ್ಮ ಜ್ಞಾನ ವೈಜ್ಞಾನಿಕವಾಗಿ, ವೈಚಾರಿಕವಾಗಿ ಇರಬೇಕು ಎಂದರು.**

---

## ಪ್ರಮುಖ ಸುದ್ದಿ

# ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಯ ಆಕಾಂಕ್ಷಿಗಳ ಆಯ್ಕೆಯನ್ನು ಪಾರದರ್ಶಕವಾಗಿ ಮಾಡಬೇಕು

» ಚಿತ್ರದುರ್ಗ

ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಯ ಆಕಾಂಕ್ಷಿಗಳ ಆಯ್ಕೆಯನ್ನು ಪಾರದರ್ಶಕವಾಗಿ ಮಾಡಬೇಕು. ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರಲ್ಲಿರುವ ವೈಮನಸ್ಸನ್ನು ಬಿಡಬೇಕು ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಸಹಕಾರ ನೀಡುವಂತೆ ರಾಜ್ಯಸಭಾ ಸದಸ್ಯರು ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಜಿ.ಸಿ ಚಂದ್ರಶೇಖರ್ ಪಕ್ಷದ ಮುಖಂಡರಿಗೆ ಕಾರ್ಯಕರ್ತರಿಗೆ ಕರೆ ನೀಡಿದರು.

ಜಿಲ್ಲಾ ಕಾಂಗ್ರೆಸ್ ಸಮಿತಿವತಿಯಿಂದ 2016–17 ನೇ ಸಾಲಿನಲ್ಲಿ ನಡೆದ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ ಚುನಾಯಿತರಾಗಿದ್ದ ಸದಸ್ಯರುಗಳೊಂದಿಗೆ ಹಾಗೂ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದಸ್ಪರ್ಧಿಸಿದ್ದವರೊಂದಿಗೆಸಿಭಾರದ ಎಸ್ ನಿಜಲಿಂಗಪ್ಪ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪೂವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಮುಂಬರುವ ತಾಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧೆ ಮಾಡುವಂತಹ ಸ್ಪರ್ಧಿಗಳ ಪರವಾಗಿ ಕೆಲಸ ಮಾಡಲು ಕಾರ್ಯಕರ್ತರ ಸನ್ನದ್ಧರಾಗ ಬೇಕಿದೆ. ಹಳ್ಳಿಗಳಲ್ಲಿ ನಮ್ಮ ಗ್ಯಾರಂಟಿಗಳು ಕೆಲಸ ಮಾಡುತ್ತಿವೆ.. ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕಿದೆ. ಇಂದಿನ ವಿಧಾನಸಭೆ ಹಾಗೂ ಲೋಕಸಭಾ ಚುನಾವಣೆಗಳಲ್ಲಿ ವೈಮನಸ್ಸಿನಿಂದಾಗಿ ಕೆಲವು ಕಡೆ ನಮಗೆ ಸೋಲಾಗಿದೆ ಇದು ಪುನರಾವರ್ತನೆ ಆಗಬಾರದು.ನಿರಂತರವಾಗಿ ಪಕ್ಷ ಸಂಘಟನೆಯಲ್ಲಿ ತೊಡಗಿದ ಕಾರ್ಯಕರ್ತರನ್ನು ಗುರುತಿಸುವ ಕೆಲಸ ಆಗಬೇಕು ಎಂದರು.




ವಿಧಾನಪರಿಷತ್ ಸದಸ್ಯರು ಹಾಗೂ ವಿಧಾನಸಭಾ ಸದಸ್ಯರು ತಾಲ್ಲೂಕುವಾರು ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕ್ ಪಂಚಾಯಿತಿ ಮಾಜಿ ಸದಸ್ಯರುಗಳ ಸಭೆಗಳನ್ನು ಮಾಡಬೇಕು. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಆಕಾಂಕ್ಷಿಗಳ ಆಕೆಯಲ್ಲಿ ಜನಪ್ರತಿನಿಧಿಗಳ ಬೆಂಬಲಿಗರೇ ಆಗಿರಬಾರದು ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸುವ ಕೆಲಸ ಆಗಬೇಕು.2016 ರ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಯ ರೀತಿ ಈ ಬಾರಿಯ ಚುನಾವಣೆಯಲ್ಲಿ ಅದಕ್ಕಿಂತಲೂ ಹೆಚ್ಚು ಸ್ಥಾನಗಳ ಪಕ್ಷದ ಗೆಲುವಿಗೆ ಶ್ರಮಿಸಬೇಕು ಎಂದು ಕರೆ ನೀಡಿದರು.

ಸಭೆಯಲ್ಲಿ ಕೆಪಿಸಿಸಿ ಉಪಾಧ್ಯಕ್ಷರಾದ ಮುರುಳೀಧರ ಹಾಲಪ್ಪ, ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್, ಶಾಸಕರುಗಳಾದ ಎನ್.ವೈ ಗೋಪಾಲಕೃಷ್ಣ, ಟಿ. ರಘುಮೂರ್ತಿ, ಬಿ.ಜಿ ಗೋವಿಂದಪ್ಪ, ಮಾಜಿ ರಾಜ್ಯಸಭಾ ಸದಸ್ಯರಾದ ಹೆಚ್. ಹನುಮಂತಪ್ಪ, ಮಾಜಿ ಸಚಿವರಾದ ಹೆಚ್. ಆಂಜನೇಯ, ಮಾಜಿ ಶಾಸಕರಾದ ಉಮಾಪತಿ, ಮಾಜಿ ವಿಧಾನ ಪರಿಷತ್ ಸದಸ್ಯರಾದ ಜಯಮ್ಮ ಬಾಲರಾಜ್, ನಿಗಮ ಮಂಡಳಿ ಅಧ್ಯಕ್ಷರುಗಳಾದ ಜಿ.ಎಸ್ ಮಂಜುನಾಥ, ಯೋಗೇಶ್ ಬಾಬು, ಗ್ಯಾರೆಂಟಿ ಪ್ರಾಧಿಕಾರದ ಅಧ್ಯಕ್ಷರಾದ ಶಿವಣ್ಣ, ಡಿಸಿಸಿ ಅಧ್ಯಕ್ಷ ತಾಜ್ ಪೀರ್, ಕೆ. ಪ್ರಧಾನ ಕಾರ್ಯದರ್ಶಿ ಪಿ. ಸಂಪತ್ ಕುಮಾರ್ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ಓಬಿಸಿ ಅಧ್ಯಕ್ಷ ಎನ್.ಡಿ.ಕುಮಾರ್, ಮುದಸಿರ್ ಖುದ್ದಸ್ ಅನಂತ ಕುಮಾರ್, ತಾಲ್ಲೂಕು ಗ್ಯಾರೆಂಟಿ ಅಧ್ಯಕ್ಷ ಪ್ರಕಾಶ್, ಪಕ್ಷದ ಮುಖಂಡರುಗಳಾದ ಹನುಮಲಿ ಷಣ್ಮುಖಪ್ಪ, ಸೋಮಶೇಖರ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಜಿಲ್ಲಾ ಪ್ರವಾಸ



» ದಾವಣಗೆರೆ

ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ.ಟಿ.ನಾರಾಯಣಸ್ವಾಮಿ ಅವರು ಏಪ್ರಿಲ್ 21 ರಂದು ಬೆಳಿಗ್ಗೆ 10 ಗಂಟೆಗೆ ದಾವಣಗೆರೆ ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಳುವರು.

### ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆ

» ದಾವಣಗೆರೆ

ಕರ್ನಾಟಕ ರಾಜ್ಯದ ಸಾಂಸ್ಕೃತಿಕ ನಾಯಕರಾದ ವಿಶ್ವಗುರು ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಗಳನ್ನು ನಾಡಿನಾದ್ಯಂತ ವ್ಯಾಪಕವಾಗಿ ಪ್ರಚುರಪಡಿಸುವ ನಿಟ್ಟಿನಲ್ಲಿ ಬಸವ ಜಯಂತಿ ಅಂಗವಾಗಿ ಅನುಭವ ಮಂಟಪ–ಬಸವಾದಿ ಶರಣರ ವೈಭವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಏಪ್ರಿಲ್ 17 ರಿಂದ 29 ರವರೆಗೆ ರಾಜ್ಯಾದ್ಯಂತ 15 ಜಿಲ್ಲೆಗಳಲ್ಲಿ ಅನುಭವ ಮಂಟಪ–ಬಸವಾದಿ ಶರಣರ ವೈಭವ ರಥಯಾತ್ರೆಯು ಸಂಚರಿಸಲಿದೆ. ಏ.20 ರಂದು ಜಿಲ್ಲೆಯ ಗಡಿಭಾಗದ ಹೆಬ್ಬಾಳು ಗ್ರಾಮಕ್ಕೆ ಆಗಮಿಸಿದ್ದು, ಜಿಲ್ಲಾ ಕೇಂದ್ರದಲ್ಲಿ ರಥಯಾತ್ರೆ ತಂಗಲಿದ್ದು, ಏ.21 ರಂದು ಬೆಳಿಗ್ಗೆ 9.30ಕ್ಕೆ ಚಾಲನೆ ನೀಡಿ ಜಗಳೂರು ತಾಲ್ಲೂಕು ಮಾರ್ಗವಾಗಿ ಬಳ್ಳಾರಿ ಜಿಲ್ಲೆಗೆ ಬೀಳ್ಕೊಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ.ಸುರೇಶ.ಬಿ.ಇಟ್ನಾಳ್ ತಿಳಿಸಿದ್ದಾರೆ.

### ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ನಿಯಮಾನುಸಾರ ಅರ್ಹತಾ ಪರೀಕ್ಷೆ ಮೂಲಕ 6ನೇ ತರಗತಿಗೆ ದಾಖಲಾತಿ ಮಾಡಿಕೊಂಡು ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಜಿಲ್ಲೆಯಲ್ಲಿರುವ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ನೀಡಲು ಜಿಲ್ಲೆಯ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ 3 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಹ ವಿದ್ಯಾರ್ಥಿಗಳು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗಳಿಂದ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಆಯಾ ತಾಲ್ಲೂಕು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗಳಿಗೆ ಸಲ್ಲಿಸುವುದು. ಇದೇ ಏಪ್ರಿಲ್ 19 ರಿಂದ ಅರ್ಜಿ ಸಲ್ಲಿಕೆ ಪ್ರಾರಂಭವಾಗಲಿದ್ದು, ಮೇ 03 ಸಂಜೆ 5 ಅರ್ಜಿ ಸಲ್ಲಿಸಲು ಕೊನೆಯ ದಿನ. ಅಪೂರ್ಣಗೊಂಡ ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ಕಡ್ಡಾಯವಾಗಿ ತಿರಸ್ಕರಿಸಲಾಗುವುದು. ಷರತ್ತು: 2025–26ನೇ ಸಾಲಿನ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಉಚಿತವಾಗಿ ಅರ್ಹತಾ ಪರೀಕ್ಷಾ ಮೂಲಕ ಆಯ್ಕೆ ಮಾಡಲಾಗುವುದು. 5ನೇ ತರಗತಿಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಗೊಂಡ ವಿದ್ಯಾರ್ಥಿಗಳನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ದಾಖಲು ಮಾಡಲಾಗುವುದು. 6ನೇ ತರಗತಿಗೆ ಮಾತ್ರ ಜಿಲ್ಲೆಗೆ ನಿಗಧಿ ಪಡಿಸಿರುವ ಗುರಿಗೆ ಅನುಗುಣವಾಗಿ ನಿಯಮಾನುಸಾರ ಪ್ರವೇಶ ಅವಕಾಶವನ್ನು ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರಿಶಿಷ್ಟ ವರ್ಗಕ್ಕೆ ಸೇರಿದವರಾಗಿದ್ದು, ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳ ಮಿತಿಯೊಳಗೆ ಇರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ದೃಢೀಕೃತ ಅಂಕಪಟ್ಟಿಯನ್ನು ಅರ್ಜಿ ಜೊತೆ ಕಡ್ಡಾಯವಾಗಿ ಸಲ್ಲಿಸುವುದು. ಮುಖ್ಯೋಪಾಧ್ಯಾಯರಿಂದ ಕಡ್ಡಾಯವಾಗಿ ಶೇಕಡವಾರು ನಮೂದಿಸಿದ ಅಂಕಪಟ್ಟಿಯನ್ನು ಮಾತ್ರ ಪರಿಗಣಿಸಲಾಗುವುದು, ಅಂಕಪಟ್ಟಿಯಲ್ಲಿ ಗ್ರೇಡ್ ಅನ್ನು ನಮೂದಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ವಿದ್ಯಾರ್ಥಿಗಳ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರ ನಿಗಧಿ ಪಡಿಸಿದ ದರದಲ್ಲಿ ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಗೆ ಒಳಪಟ್ಟಿರಬೇಕು. ಪೋಷಕರು ಒಂದು ಬಾರಿ ಶಾಲೆಯನ್ನು ಆಯ್ಕೆಗೊಳಿಸಿದ ಮೇಲೆ ಅದೇ ಶಾಲೆಗೆ ದಾಖಲಾತಿ ಮಾಡಲಾಗುವುದು ಯಾವುದೇ ಕಾರಣಕ್ಕೂ ಶಾಲೆಯನ್ನು ಬದಲಾಯಿಸುವುದಿಲ್ಲ. ಹಾಗೂ ಆಯ್ಕೆಯಾದ ವಿದ್ಯಾರ್ಥಿಯು ಆಯ್ಕೆಯಾದ ಶಾಲೆಯಲ್ಲಿ ಯಾವ ಪಠ್ಯಕ್ರಮ ಇರುತ್ತದೆಯೋ ಅದೇ ಪಠ್ಯಕ್ರಮದಲ್ಲಿ ವಿದ್ಯಾಭ್ಯಾಸ ಮಾಡುವುದು. ಈ ಷರತ್ತಿನಲ್ಲಿ ಯಾವುದೇ ಬದಲಾವಣೆ ಮಾಡಲಾಗುವುದಿಲ್ಲ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ

**ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ –ಏ.26 ರಿಂದ ಜೂನ್ 09 ರವರೆಗೆ ಜಾನುವಾರುಗಳಿಗೆ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕೆ**

# ಕಾಲುಬಾಯಿ ಲಸಿಕಾ ಅಭಿಯಾನ ಯಶಸ್ವಿಗೊಳಿಸಿ

» ಚಿತ್ರದುರ್ಗ



ಜಿಲ್ಲೆಯಾದ್ಯಂತ 7ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಇದೇ ಏಪ್ರಿಲ್ 26 ರಿಂದ ಜೂನ್ 09 ರವರೆಗೆ ನಡೆಯಲಿದ್ದು, ಲಸಿಕಾ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಪಶು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮ ಅಡಿಯಲ್ಲಿ 7ನೇ ಸುತ್ತಿನ ಕಾಲುಬಾಯಿ ರೋಗದ ಲಸಿಕಾ ಅಭಿಯಾನ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಾನುವಾರುಗಳಿಗೆ ಉಚಿತ ಕಾಲುಬಾಯಿ ರೋಗ ಲಸಿಕಾ ಅಭಿಯಾನದ ಜೊತೆಗೆ ಚರ್ಮಗಂಟು ರೋಗದ ಲಸಿಕೆಯನ್ನು ನೀಡಲಾಗುತ್ತಿದೆ. ತಪ್ಪದೇ ಜಾನುವಾರುಗಳಿಗೆ ಲಸಿಕೆಯನ್ನು ಹಾಕಿಸಿ, ರೋಗ ಬರದಂತೆ ಜಾನುವಾರುಗಳನ್ನು ರಕ್ಷಿಸಿ, ಆರ್ಥಿಕ ನಷ್ಟ ತಡೆಯಿರಿ ಎಂದು ಹೇಳಿದರು. ರೈತರು ಕೂಡ ಸರ್ಕಾರದಿಂದ ಏರ್ಪಡಿಸಲಾಗಿರುವ ಈ ವಿಶೇಷ ಲಸಿಕಾ ಅಭಿಯಾನವನ್ನು ಯಶಸ್ವಿಗೊಳಿಸಲು, ತಮ್ಮ ಜಾನುವಾರುಗಳಿಗೆ ತಪ್ಪದೆ ಲಸಿಕೆ ಹಾಕಿಸುವ ಮೂಲಕ ಸಹಕಾರ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಮನವಿ ಮಾಡಿದರು.

ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆ ಉಪನಿರ್ದೇಶಕ ಡಾ.ಎನ್.ಕುಮಾರ್ ಮಾತನಾಡಿ, ಕಾಲುಬಾಯಿ ರೋಗವು ವೈರಾಣುವಿನಿಂದ ಹರಡುವ ಸಾಂಕ್ರಾಮಿಕ ರೋಗ. ಇದರಿಂದ ಜಾನುವಾರುಗಳು ಸಾವನ್ನಪ್ಪುವುದಿಲ್ಲವಾದರೂ, ರೈತರಿಗೆ ಆರ್ಥಿಕ ಸಂಕಷ್ಟಗಳನ್ನು ತಂದೊಡ್ಡುತ್ತದೆ. ಹೀಗಾಗಿ ಕಾಲುಬಾಯಿ ರೋಗವನ್ನು ನಿಯಂತ್ರಿಸಿ ನಿರ್ಮೂಲನೆ ಮಾಡಲು ಪ್ರತಿ 6 ತಿಂಗಳಿಗೊಮ್ಮೆ ಈ ರೋಗದ ವಿರುದ್ಧ ಲಸಿಕೆ ಹಾಕಿಸುವುದು ಕಡ್ಡಾಯ ಎಂದರು. ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಚಿತ್ರದುರ್ಗ ಜಿಲ್ಲೆಗೆ ಕಾಲುಬಾಯಿ ರೋಗ ಲಸಿಕೆಯು ಕೇಂದ್ರ ಸರ್ಕಾರದಿಂದ ಸರಬರಾಜಾಗಿದ್ದು, ಈ ರೋಗದ ವಿರುದ್ಧ ಎಲ್ಲಾ ದನ, ಎಮ್ಮೆ ಮತ್ತು ಕರುಗಳಿಗೆ ಉಚಿತವಾಗಿ ಲಸಿಕಾ ಕಾರ್ಯಕ್ರಮವನ್ನು ಇದೇ ಏಪ್ರಿಲ್ 26 ರಿಂದ ಜೂನ್ 09 ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲೆಯಲ್ಲಿ 1,76,949 ದನ, 78,654 ಎಮ್ಮೆ ಸೇರಿದಂತೆ ಒಟ್ಟು 2,55,603 ಜಾನುವಾರುಗಳಿದ್ದು, 3,17,587 ಡೋಸ್ ಲಸಿಕೆ ಲಭ್ಯವಿರುತ್ತದೆ. ಜಿಲ್ಲೆಯಲ್ಲಿ ಒಟ್ಟು 3,390 ಬ್ಲಾಕ್‌ಗಳನ್ನು ಮಾಡಲಾಗಿದೆ. 291 ಲಸಿಕಾದಾರರು ಮನೆ ಬಾಗಿಲಿಗೆ ಭೇಟಿ ನೀಡಿ, ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ. ರೈತರು ಲಸಿಕಾ ಸಿಬ್ಬಂದಿಗಳಿಗೆ ಸಹಕರಿಸಿ ತಪ್ಪದೇ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದ "ಉಚಿತ ಕಾಲುಬಾಯಿ ರೋಗ ಲಸಿಕಾ ಅಭಿಯಾನದ" ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆ ಉಪನಿರ್ದೇಶಕ ಡಾ.ಎನ್.ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಶಿಕ್ಷಣ ಇಲಾಖೆಯ ಚಿದಾನಂದ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಸೇರಿದಂತೆ ಮುಖ್ಯ ಪಶುವೈದ್ಯಾಧಿಕಾರಿಗಳಾದ ಡಾ.ಎನ್.ಗಿರಿರಾಜ್, ಡಾ.ಇಂದ್ರಬಾಯಿ, ಡಾ.ರಂಗಪ್ಪ, ಡಾ.ಕಿರಣ್, ಡಾ.ರಂಗಸ್ವಾಮಿ, ಡಾ.ರೇವಣ್ಣ, ಡಾ.ಹರೀಶ್ ಇದ್ದರು.

# ಪಿಲ್ಲಹಳ್ಳಿಯಲ್ಲಿ ಅದ್ದೂರಿ ಅಂಬೇಡ್ಕರ್ ಜಯಂತಿ

» ಪರಶುರಾಂಪುರ




ಬಾಬಾ ಸಾಹೇಬರು ಈ ದೇಶಕ್ಕೆ ನೀಡಿದ ಸಂವಿಧಾನದಿಂದ ಇಂದು ದೇಶ ಸೌಹಾರ್ದತೆ ಹಾಗೂ ಭಾವೈಕ್ಯದಿಂದ ಬದುಕುತ್ತಿದೆ. ಮೇಲಾಗಿ, ಇಡೀ ಜಗತ್ತಿನಲ್ಲಿ ನಮ್ಮ ಪ್ರಜಾಪ್ರಭುತ್ವ ಇತರರಿಗೆ ಮಾದರಿಯಾಗಿದೆ ಎಂದು ಕಾರ್ಯಕ್ರಮದ ಅಧ್ಯಕ್ಷ ಶಿಕ್ಷಕ ಗುರುಸ್ವಾಮಿ ತಿಳಿಸಿದರು.

ಸಮೀಪದ ಪಿಲ್ಲಹಳ್ಳಿ ಗ್ರಾಮದಲ್ಲಿ ಶನಿವಾರ ಸಮತಾ ಸೇವಾ ಸಮಿತಿ ಹಾಗೂ ಭೀಮ್ ರಾವ್ ಬಳಗದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಳ ಸಮುದಾಯದಲ್ಲಿ ಆತ್ಮವಿಶ್ವಾಸವನ್ನು ಮೂಡಿಸುವ ಮತ್ತು ಹೊಸ ನಾಯಕರನ್ನು ಸೃಷ್ಟಿಸುವ ಸಾಧನವಾಗಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಬಾಬಾ ಸಾಹೇಬರು ನಂಬಿದ್ದರು ಎಂದರು.

ವಕೀಲ ಪರಮೇಶ್ ಮಾತನಾಡಿ, ಅಂಬೇಡ್ಕರ್ ಅವರು ಜೀವನದ ಉದ್ದಕ್ಕೂ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡಿದ್ದಾರೆ. ಇವರ ಆಲೋಚನೆ, ದೃಷ್ಟಿಕೋನಗಳು ಕಾಲವನ್ನು ಮೀರಿದವುಗಳಾಗಿದ್ದವು. ಆರ್ಥಿಕ ಅಭಿವೃದ್ಧಿ, ಕೈಗಾರಿಕರಣ, ರಾಜಕೀಯ ಭಾಗವಹಿಸಿಕೆ, ಮಹಿಳಾ ಸಬಲೀಕರಣ ಮತ್ತು ಸಮಾನತೆ ಹಾಗೂ ಸಾಮಾಜಿಕ ಏಕೀಕರಣದ ಬಗ್ಗೆ ಪ್ರಸ್ತುತಕ್ಕೆ ಸಂಬಂಧಿಸಿದಂತೆ ಮೊದಲೇ ಯೋಚಿಸಿದ್ದರು ಎಂದು ತಿಳಿಸಿದರು.

ಭಾರತೀಯ ಪರಿವರ್ತನ ಸಂಘದ ಕೆಂಚರಾಯಪ್ಪ ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ಅವರು ಸಾಮಾಜಿಕ ವ್ಯವಸ್ಥೆಯ ವಿರುದ್ಧ ಹೋರಾಟ ನಡೆಸಿದ್ದಕ್ಕಾಗಿ ಅಂಬೇಡ್ಕರ್ ಅವರನ್ನು ಬಹುಜನ ನಾಯಕ ಎಂದು ಕರೆಯುವುದರ ಜತೆ ದೇಶ ಸಂಪೂರ್ಣ ಸಮಾನತೆ ಕಂಡಾಗ ಬಾಬಾ ಸಾಹೇಬರ ಕನಸು ನನಸಾಗುತ್ತದೆ ಎಂಬುದನ್ನು ನಾವುಗಳು ಅರಿಯಬೇಕಾಗಿದೆ ಎಂದರು.

ಕಲಾವಿದ ಮುತ್ತುರಾಜ್ ಮಾತನಾಡಿ, ಶಿಕ್ಷಣದ ಮೂಲಕ ಸಬಲೀಕರಣ, ಸಾಮಾಜಿಕ ಕಟ್ಟುಪಾಡುಗಳಿಗೆ ಸವಾಲು ಹಾಕುವ, ಭಯ ಹುಟ್ಟಿಸುವ ಸಾಧನವಾಗಿ ಶಿಕ್ಷಣಕ್ಕೆ ಹೆಚ್ಚಿನ ಒತ್ತನ್ನು ಬಿ.ಆರ್ ಅಂಬೇಡ್ಕರ್ ನೀಡಿದ್ದರು ಎಂದರು.

ಈ ವೇಳೆಯಲ್ಲಿ ಜಯಂತಿ ಅಂಗವಾಗಿ ಭೀಮ ನಮನಗಳ ಬಳಿಕ ಕುಂಭಮೇಳ ಜೊತೆಗೆ ಅನ್ನಸಂತರ್ಪಣೆ ಕಾರ್ಯಕ್ರಮದ ಬಳಿಕ ಜನಪದ ವಾದ್ಯಗಳೊಂದಿಗೆ ಭವ್ಯ ಮೆರವಣಿಗೆ ನಡೆಯಿತು.

ಸಂದರ್ಭದಲ್ಲಿ ಗ್ರಾಪಂ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಮೌರ್ಯ ಉಪಾಧ್ಯಕ್ಷ ರಂಗನಾಥ ಸದಸ್ಯರಾದ ಶ್ವೇತಾ ಶಿವಣ್ಣ, ತಿಮ್ಮೇಗೌಡ, ಕಲಾವಿದ ಮುತ್ತುರಾಜ್, ತಾಪಂ ಮಾಜಿ ಸದಸ್ಯ ನರಸಿಂಹಯ್ಯ ಸೇರಿದಂತೆ ಸಮತಾ ಸೇವಾ ಸಮಿತಿ ಮತ್ತು ಭೀಮ್ ರಾವ್ ಬಳಗದ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಜನಿವಾರ ತೆಗೆಸಿರುವುದನ್ನು ಖಂಡಿಸಿದ ಕರ್ನಾಟಕ ಬ್ರಾಹ್ಮಣ ಮಹಾಸಭಾ



» ಚಿತ್ರದುರ್ಗ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ರಾಜ್ಯದಲ್ಲಿ ಎರಡು ದಿನಗಳ ಕಾಲ ನಡೆಸಿದ ಸಿ.ಇ.ಟಿ. ಪರೀಕ್ಷೆಯಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಜನಿವಾರ ತೆಗೆಸಿರುವುದನ್ನು ಖಂಡಿಸಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಹಾಗೂ ಜಿಲ್ಲಾ ಬ್ರಾಹ್ಮಣ ಮಹಾಸಭಾ ವತಿಯಿಂದ ಶನಿವಾರ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.ಬೀದರ್‌ನ ಸ್ಥಾಯಿ ಸ್ಪೂರ್ತಿ ಪರೀಕ್ಷಾ ಕೇಂದ್ರ ಹಾಗೂ ಶಿವಮೊಗ್ಗದ ಆದಿಚುಂಚನಗಿರಿ ಕಾಲೇಜಿನ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳಿಗೆ ಜನಿವಾರ ತೆಗೆಸಿರುವ ಅಧಿಕಾರಿಗಳು ಧಾರ್ಮಿಕ ಆಚರಣೆಗೆ ಅವಮಾನ ಮಾಡಿದ್ದಾರೆ. ತಪ್ಪಿತಸ್ಥರ ಮೇಲೆ ಕೂಡಲೆ ಕಾನೂನು ರೀತಿಯ ಕ್ರಮ ಕೈಗೊಳ್ಳಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.ರಾಜ್ಯದಲ್ಲಿ 45 ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಬ್ರಾಹ್ಮಣರಿದ್ದರೂ ಕೇವಲ ಹತ್ತು ಲಕ್ಷ ಎಂದು ಜಾತಿ ಗಣತಿಯಲ್ಲಿ ಲೆಕ್ಕ ತೋರಿಸಿ ಬ್ರಾಹ್ಮಣ ಜನಾಂಗವನ್ನು ನಿರ್ಲಕ್ಷಿಸುತ್ತಿರುವುದು ಮನಸ್ಸಿಗೆ ನೋವುಂಟು ಮಾಡಿದೆ. ಈ ಜಾತಿ ಸಮೀಕ್ಷೆಯನ್ನು ಸರ್ಕಾರ ಪರಿಗಣನೆಗೆ ತೆಗೆದುಕೊಳ್ಳಬಾರದು. ಮುಂದಿನ ದಿನಗಳಲ್ಲಿ ಈ ರೀತಿಯ ಘಟನೆಗಳು ಸಂಭವಿಸದಂತೆ ಸರ್ಕಾರ ಎಚ್ಚೆತ್ತುಕೊಳ್ಳುವಂತೆ ಪ್ರತಿಭಟನಾನಿರತರು ಆಗ್ರಹಿಸಿದರು.

**ಪ್ರಮುಖ ಸುದ್ದಿ**

# ಜಾತಿ ಗಣತಿಯಲ್ಲಿ ಭೋವಿ, ಉಪಜಾತಿ ವಡ್ಡರ್ ಎಂದು ಬರೆಸಿ

» ಚಿತ್ರದುರ್ಗ



ತಮ್ಮ ಮನೆಗಳಿಗೆ ಜಾತಿ ಗಣತಿಗೆ ಬರುವವರ ಬಳಿ ನಮ್ಮ ಜಾತಿ ಭೋವಿ,ಉಪಜಾತಿ ವಡ್ಡರ್ ಎಂದು ಬರೆಸುವುದರ ಮೂಲಕ ನಮ್ಮ ಮುಂದಿನ ಪೀಳಿಗೆಗೆ ಸರ್ಕಾರದಿಂದ ಸಿಗುವಂತ ವಿವಿಧ ರಿತಿಯ ಸೌಲಭ್ಯವನ್ನು ಪಡೆಯಲು ಅನುಕೂಲ ಮಾಡಿಕೊಡಬೇಕಿದೆ ಎಂದು ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ತಮ್ಮ ಸಮುದಾಯವರಿಗೆ ಕರೆ ನೀಡಿದರು.

ಚಿತ್ರದುರ್ಗ ನಗರದ ಹೂರ ವಲಯದಲ್ಲಿನ ಭೋವಿ ಗುರಪೀಠದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಡಾ.ಬಿ.ಆರ್. ಅಂಬೇಡ್ಕರ್ ರವರ ಜಯಂತ್ಯೋತ್ಸವ, ಪರಿಶಿಷ್ಟ ಜಾತಿ ಸಮೀಕ್ಷೆ, ಭೋವಿ ಜನಜಾಗೃತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಶ್ರೀಗಳು, ಸುಪ್ರೀಂ ಕೋರ್ಟ್ ಸರ್ಕಾರಕ್ಕೆ ಒಳ ಮೀಸಲಾತಿಯನ್ನು ಜಾರಿ ಮಾಡಲು ಸೂಚನೆ ನೀಡದೆ ಆದರೆ ಇದರ ಜಾರಿಗೆ ದತ್ತಾಂಶ ಅಗತ್ಯವಾಗಿದೆ ಎಂದು ತಿಳಿಸಿದೆ ಈ ಹಿನ್ನಲೆಯಲ್ಲಿ ಸರ್ಕಾರದ ಬಳಿ ಸರಿಯಾದ ದತ್ತಾಂಶ ಇಲ್ಲದಿರುವುದರಿಂದ ಈಗ ಜಾತಿ ಸಮೀಕ್ಷೆಯನ್ನು ಮಾಡಲು ಮುಂದಾಗಿದೆ ಬಹಶಃ ಮೇ ಮೊದಲವಾರ ಅಥವಾ ಮೇ.10ರ ನಂತರ ನಿಮ್ಮ ಮನೆಗಳಿಗೆ ಜಾತಿ ಸಮೀಕ್ಷೆ ಮಾಡುವ ಜಾತಿ ಗಣತಿದಾರರು ಬರುತ್ತಾರೆ ಈ ಸಮಯದಲ್ಲಿ ನೀವುಗಳು ಜಾತಿಯ ಕಾಲಂನಲ್ಲಿ ಭೋವಿ ಎಂದೂ ಉಪ ಜಾತಿ ಕಾಲಂನಲ್ಲಿ ವಡ್ಡರ್ ಎಂದು ಬರೆಸಬೇಕಿದೆ ಎಂದು ತಿಳಿಸಿ ಇದರ ಬಗ್ಗೆ ನೀವುಗಳು ನಿಮ್ಮ ಗ್ರಾಮ, ತಾಲ್ಲೂಕು, ಜಿಲ್ಲೆಗಳಲ್ಲಿ ಸಮುದಾಯದವರಲ್ಲಿ ಜಾಗೃತಿಯನ್ನು ಮೂಡಿಸಬೇಕಿದೆ ಎಂದು ತಿಳಿಸಿದರು.

ನಿಮ್ಮ ಬಳಿಯಲ್ಲಿ ನಿಮ್ಮ ತಂದೆಯ ಅಥವಾ ತಾತನ ಮನೆ ಇದ್ದರೆ ಆದು ನಿಮ್ಮದ್ದಲ್ಲ ನೀವುಗಳು ನನ್ನ ಬಳಿ ಮನೆ ಇಲ್ಲ ಎಂದು ನಮೂದಿಸಿ, ಇದೇ ರೀತಿ ನೀವುಗಳು ಸಾಲದ ಮೂಲಕ ವಾಹನಗಳನ್ನು ಹೊಂದಿದ್ದರೆ ಅವುಗಳು ಸಹಾ ನಿಮ್ಮದ್ದಲ್ಲ ಅವುಗಳು ನೀವು ಸಾಲವನ್ನು ಪೂರ್ಣ ಪ್ರಮಾಣದಲ್ಲಿ ಕಟ್ಟುವವರೆಗೂ ಬ್ಯಾಂಕ್ ನವರದ್ದು ಈ ಹಿನ್ನಲೆಯಲ್ಲಿ ನೀವುಗಳು ವಾಹನಗಳನ್ನು ಸಾಲದಲ್ಲಿ ಹೊಂದಿದರೆ ಅದರ ಮಾಹಿತಿಯನ್ನು ನೀಡಬೇಡಿ, ಇದೇ ರೀತಿ ಬೇರೆ ಯಾವ ಅಸ್ತಿಯನ್ನು ನೀವುಗಳು ಬೇರೆಯವರಿಂದ ಅದರ ಮಾಹಿತಿಯನ್ನು ಗಣತಿದಾರರಿಗೆ ನೀಡಬೇಡಿ, ನಿಮ್ಮ ಸ್ವಂತ ದುಡಿಮೆ ಇದ್ದರೆ ಮಾತ್ರ ಮಾಹಿತಿ ನೀಡಿ ಎಂದ ಶ್ರೀಗಳು ನೀವುಗಳು ಈಗ ನೀಡುವ ಮಾಹಿತಿಯಿಂದ ನಿಮ್ಮ ಮುಂದಿನ ಪೀಳಿಗೆ ತುಂಬಾ ಅನುಕೂಲವಾಗಲಿದೆ. ಈ ಹಿನ್ನಲೆಯಲ್ಲಿ ಗಣತಿದಾರರಿಗೆ ಸರಿಯಾದ ರೀತಿಯಲ್ಲಿ ಮಾಹಿತಿಯನ್ನು ನೀಡುವಂತೆ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ಸಮುದಾಯದ ಮುಖಂಡರಿಗೆ ಕರೆ ನೀಡಿದರು.

ಈ ವಿಷಯಕ್ಕೆ ಸಂಬಂಧಪಟ್ಟಂತೆ ಮುಂದಿನ ಮೇನಲ್ಲಿ ಬೆಂಗಳೂರಿನಲ್ಲಿ ಮತ್ತೊಂದು ಸಭೆಯನ್ನು ಮಾಡಲಾಗುವುದು ಅಲ್ಲಿಗೆ ಬರುವಾಗ ಎಲ್ಲರು ತಮ್ಮ ಗ್ರಾಮದಲ್ಲಿನ ಸಮುದಾಯ ಜನತೆಯ ಮಾಹಿತಿಯನ್ನು ಪೂರ್ಣ ಪ್ರಮಾಣದಲ್ಲಿ ತೆಗೆದುಕೊಂಡು ಬರಬೇಕಿದೆ ಇದರಿಂದ ನಮಗೆ ಮಂದಿನ ದಿನದಲ್ಲಿ ಉಪಯೋಗವಾಗಲಿದೆ, ಈ ಕಾರ್ಯವನ್ನು ಸಮುದಾಯದವರೆಲ್ಲಾ ಸೇರಿ ಮಾಡಬೇಕಿದೆ ಇದರೊಂದಿಗೆ ಗ್ರಾಮಗಳಲ್ಲಿ ಸಭೆಯನ್ನು ಮಾಡುವುದರ ಮೂಲಕ ಜನತೆಯಲ್ಲಿ ಜಾಗೃತಿಯನ್ನು ಮೂಡಿಸುವಂತ ಕಾರ್ಯವನ್ನು ಮಾಡುವಂತೆ ತಿಳಿ ಹೇಳಿದರು.

ಶಾಸಕರಾದ ಡಾ.ಎಂ.ಚಂದ್ರಪ್ಪ ಮಾತನಾಡಿ, ನಮ್ಮ ರಾಜ್ಯದಲ್ಲಿ ಸದಾನಂದಗೌಡರವರು ಮುಖ್ಯಮಂತ್ರಿಯಾಗಿದ್ದಾಗ ಈ ಒಳ ಮೀಸಲಾತಿಯನ್ನು ಜಾರಿಗೆ ತರಬೇಕೆಂದು ಹಲವಾರು ವರ್ಷಗಳಿಂದಪ್ರಭಾವಿವ್ಯಕ್ತಿಗಳಿಂದತಯಾರಿ ನಡೆಯುತ್ತಿತ್ತು, ಇದರ ಬಗ್ಗೆ ಸದನದಲ್ಲಿ ನಮ್ಮ ಭೋವಿ ಜನಾಂಗದ ಶಾಸಕರು ಮಂತ್ರಿಗಳು ಸೇರಿ ತಡೆ ಹಿಡಿಯುವಂತ ಕಾರ್ಯವನ್ನು ಮಾಡಲಾಗಿತ್ತು ಇದರ ಬಗ್ಗೆ ಯಾರಿಗೂ ಸಹಾ ಅಷ್ಠಾಗಿ ಗೊತ್ತಿಲ್ಲ, ನಮ್ಮ ಹಂತದಲ್ಲಿ ಈ ಒಳ ಮೀಸಲಾತಿ ಜಾರಿಯಾಗದಂತೆ ತಡೆ ಹಿಡಿಯುವ ಕಾರ್ಯವನ್ನು ಮಾಡಲಾಗಿದೆ. ಈ ಮುಂಚೆ ನಮ್ಮ ಸಮುದಾಯಕ್ಕೆ ರಾಜ್ಯದಲ್ಲಿ ಪೂರ್ಣ ಪ್ರಮಾಣದಲ್ಲಿ ಎಸ್.ಸಿ. ಜನಾಂಗಕ್ಕೆ ಸೇರಿಸಿರಲಿಲ್ಲ,ಹರಿಹರದ ಹೊಳೆಯಿಂದ ಆಚೇಗೆ ನಮ್ಮ ಸಮುದಾಯದವರನ್ನು ಸಾಮಾನ್ಯ ವರ್ಗಕ್ಕೆ ಇಡಲಾಗಿತ್ತು ಇದರ ಬಗ್ಗೆ ಅಂದಿನ ಪ್ರಧಾನ ಮಂತ್ರಿ ಇಂದಿರಾಗಾಂಧಿಯವರಿಗೆ ಇದರ ಬಗ್ಗೆ ಪೂರ್ಣ ಪ್ರಮಾಣದ ವಿಷಯವನ್ನು ತಿಳಿಸಿ ರಾಜ್ಯ ಪೂರ್ಣ ಭೋವಿ ಸಮುದಾಯವನ್ನು ಎಸ್.ಸಿ. ವರ್ಗಕ್ಕೆ ಮಾಡಿಸಲಾಯಿತು. ನಮ್ಮ ಸಮುದಾಯದವರು ಇನ್ನೂ ಸಹಾ ಕಲ್ಲು ಒಡೆಯುವುದರಲ್ಲಿಯೇ ಇದ್ದಾರೆ ಅರ್ಥಿಕವಾಗಿ ಶೃಕ್ಷಣಿಕವಾಗಿ ಹಿಂದೆ ಉಳಿದಿದ್ದಾರೆ, ಇವರು ಪ್ರಗತಿಯನ್ನು ಹೊಂದಬೇಕಾದರೆ ಗುರುಗಳು ಹೇಳಿದ ರೀತಿಯಲ್ಲಿ ಜಾತಿಗಣತಿಯಲ್ಲಿ ಬರೆಸಬೇಕಿದೆ ಎಂದರು.

ಭೋವಿ ಅಭೀವೃದ್ಧಿ ನಿಗಮದ ಅಧ್ಯಕ್ಷರಾದ ರವಿಕುಮಾರ್ ಮಾತನಾಡಿ, ನಮ್ಮ ಸಮುದಾಯದವರು ನಮ್ಮ ಜಾತಿಯ ಹೆಸರನ್ನು ಹೇಳಲು ಹಿಂದೆ ಮುಂದೆ ನೋಡುತ್ತಿದ್ದಾರೆ ಅಕ್ಕ–ಪಕ್ಕದವರು ಏನು ಅನ್ನುತ್ತಾರೋ ಎಂಬ ಗೀಳು ಅವರನ್ನು ಕಾಡುತ್ತಿದೆ ಇದರಿಂದ ರಾಜ್ಯದಲ್ಲಿ ನಮ್ಮ ಸಮುದಾಯದ ಜನಸಂಖ್ಯೆ ಹೆಚ್ಚಾಗಿ ಇದ್ದರೂ ಸಹಾ ಈ ರೀತಿಯ ಮನೋಭಾವದಿಂದ ಕಡಿಮೆ ಎನ್ನುವಂತಾಗಿದೆ, ಜಾತಿಗಣಿತಿಯವರು ಬಂದಾಗ ಜವಾಬ್ದಾರಿಯಿಂದ ವರ್ತಿಸಿ ನಮ್ಮ ಜಾತಿಯ ಹೆಸರನ್ನು ಧೈರ್ಯವಾಗಿ ತಿಳಿಸುವುದ್ದಲ್ಲದೆ ಬರೆಯಿಸಬೇಕಿದೆ. ನಮ್ಮ ಸಮುದಾಯದಲ್ಲಿಯೇ ನಮ್ಮಲ್ಲಿ ಒಡಕನ್ನು ಮೂಡಿಸುವ ಕಾರ್ಯವಾಗುತ್ತಿದೆ, ನಮ್ಮ ಹುಟ್ಟು–ಸಾವು ವಡ್ಡರಗೀಯೇ ಇರಬೇಕಿದೆ ನಾವು ವಡ್ಡರು ಎನ್ನುವುದಕ್ಕೆ ಹಿಂಜರಿಯಬಾರದು ಹೆಮ್ಮೆ ಪಡಬೇಕಿದೆ ಎಂದರು.ನಮ್ಮ ಸಮುದಾಯವರ ಯುವ ಜನತೆ ಇಲ್ಲಿಂದ ಹೋದ ಮೇಲೆ ನಿಮ್ಮ ನಿಮ್ಮ ವ್ಯಾಪ್ತಿಯಲ್ಲಿ ಬರುವಂತ ಗ್ರಾಮಗಳಲ್ಲಿ ಜಾತಿಗಣತಿಯವರು ಬಂದಾಗ ಯಾವ ರೀತಿ ಬರೆಸಬೇಕು ಎಂಬುದರ ಬಗ್ಗೆ ಜಾಗೃತಿಯನ್ನು ಮೂಡಿಸಬೇಕಿದೆ. ಇದರಿಂದ ನಮ್ಮ ಸಮುದಾಯಕ್ಕೆ ಮುಂದೆ ಆಗಬಹುದಾದ ಅನ್ಯಾಯವನ್ನು ತಡೆಯಬೇಕಿದೆ. ನಮ್ಮ ನಮ್ಮಲ್ಲಿನ ಮೈಮನಸ್ಸು ಬಿಟ್ಟು ಸಮುದಾಯದ ಪ್ರಗತಿಗೆ ಒಂದಾಗಿರಿ, ಮೇನಲ್ಲಿ ನಡೆಯುವ ಜಾತಿ ಜನಗಣತಿಯಲ್ಲಿ ಎಲ್ಲರು ಸಹಾ ಸಕ್ರಿಯವಾಗಿ ಭಾಗವಹಿಸಿ ನಮ್ಮ ಜಾತಿಯ ಹೆಸರನ್ನು ತಪ್ಪದೆ ಬರೆಸಬೇಕಿದೆ ಎಂದರು.

ಹೆಚ್,ಅನಂದಪ್ಪ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದರು, ರವಿ ಪೂಜಾರ್ ಪ್ರಸ್ತಾವಿಕವಾಗಿ ಮಾತನಾಡಿದರು ಭೋವಿ ಗುರುಪೀಠದ ಸಿಇಓ ಗೋವಿಂದಪ್ಪ ಕಾರ್ಯಕ್ರಮ ನಿರೂಪಿಸಿದರು. ತದ ನಂತರ ಡಾ.ಬಿ.ಆರ್. ಅಂಬೇಡ್ಕರ್ ರವರ ಜಯಂತ್ಯೋತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ಜಿಲ್ಲಾ ಕಾರ್ಯದರ್ಶಿ ಲಕ್ಷ್ಮಣ್, ದೊಡ್ಡರಂಗಣ್ಣ, ಗೋಪಾಲ್, ಲಕ್ಷ್ಮಣ್ ರಾಡಿ ವಡ್ಡರ್, ಬಾಲಕೃಷ್ಣ ಬಸವರಾಜು, ವೆಂಕಟೇಶ್, ರಾಮು, ಸಿದ್ದರಾಮು ಜಯ್ಯಣ್ಣ, ರಾಮಾಂಜನೇಯ, ಪರಶುರಾಮ್. ಉಮಾ ಗಾದ್ದಪ್ಪ ಶಶಿಕಲಾ, ಮುನಿರಾಜು, ತಿಮ್ಮಯ್ಯ, ಮುನಿಯಪ್ಪ ಹನುಮಂತಪ್ಪ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಜಿಲ್ಲಾ, ತಾಲ್ಲೂಕು ಮಟ್ಟದ ಪದಾಧಿಕಾರಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ತಾಂತ್ರಿಕ ಶಿಕ್ಷಣ ನೀಡಲು ಮಕ್ಕಳ ಸ್ನೇಹಿ ಗ್ರಂಥಾಲಯ ಕಾರ್ಯನಿರ್ವಹಣೆ



» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ಗ್ರಾಮೀಣ ಭಾಗಗಳಲ್ಲೂ ಗ್ರಂಥಾಲಯಗಳನ್ನು ಸ್ಥಾಪಿಸಿ ಗ್ರಾಮ ಪಂಚಾಯಿತಿವತಿಯಿಂದ ಅವುಗಳನ್ನು ನಿರ್ವಹಣೆ ಮಾಡಿ, ಪತ್ರಿಕೆಯೂ ಸೇರಿದಂತೆ ಹಲವಾರು ಪುಸ್ತಕಗಳನ್ನು ಗ್ರಂಥಾಲಯದಲ್ಲಿ ಸಾರ್ವಜನಿಕರಿಗೆ ಸುಲಭವಾಗಿ ದೊರೆಯುವಂತೆ ಮಾಡಿ ಜ್ಞಾನಾರ್ಜನೆಗೆ ಸರ್ಕಾರ ಅವಕಾಶ ಮಾಡಿಕೊಟ್ಟಿದೆ. ಇದರ ಜೊತೆಯಲ್ಲಿ ಮಕ್ಕಳ ಸ್ನೇಹಿ ಗ್ರಂಥಾಲಯವನ್ನು ಸಹ ನೂತನವಾಗಿ ಅಳವಡಿಸಿಕೊಂಡು ಮಕ್ಕಳಿಗೂ ನೈಸರ್ಗಿಕ ಸಂಪತ್ತು ಹಾಗೂ ನಾಯಕತ್ವಗುಣಗಳನ್ನು ಬೆಳೆಸುವ ಬಗ್ಗೆ ಮಾರ್ಗದರ್ಶನ ನೀಡಲಾಗುವುದು ಎಂದು ಪ್ರಭಾರ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್ ತಿಳಿಸಿದರು. ಅವರು, ಶನಿವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಆವರಣದಲ್ಲಿ ತಾಲ್ಲೂಕಿನ 38 ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಂಥಾಲಯ ಅಧಿಕಾರಿಗಳಿಗೆ ಅಬ್ದುಲ್ ನಜೀರ್‌ಸಾಬ್‌ಗ್ರಾಮೀಣಾಭಿವೃದ್ಧಿಸಂಸ್ಥೆವತಿಯಿಂದ ಆಯೋಜಿಸಿದ್ದ ಮೂರನೇಹಂತದ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮಪಂಚಾಯಿತಿ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಗ್ರಂಥಾಲಯ ಅಧಿಕಾರಿ ತಾಂತ್ರಿಕವಾಗಿಯೂ ಪರಿಣಿತಿಹೊಂದಬೇಕಿದೆ. ಕಾರಣ, ಮುಂದಿನ ದಿನಗಳಲ್ಲಿ ಡಿಜಿಟಲ್ ಸಾಕ್ಷರತೆ ತಂತ್ರಾಂಶಗಳ ಬಳಕೆ ಬಗ್ಗೆ ಸಹ ಮಾಹಿತಿ ನೀಡಬೇಕಿದೆ ಎಂದರು. ಸಹಾಯಕ ನಿರ್ದೇಶಕರಾದ ಸಂತೋಷ್, ಸಂಪತ್‌ಕುಮಾರ್, ತರಬೇತುದಾರರಾದ ಆರ್.ಗಾದ್ರಿಪಾಲಯ್ಯ, ಡಿಟಿಸಿ ಜಯಲಕ್ಷ್ಮಿ ಮುಂತಾದವರು ಮಾರ್ಗದರ್ಶನ ನೀಡಿದರು. ಕಾರ್ಯಗಾರದಲ್ಲಿ ಗ್ರಂಥಾಲಯ ಸಹಾಯಕರಾದ ಸೋಮಗುದ್ದುರಮೇಶ್, ನಗರಂಗೆರೆ ನಿರಂಜನ್, ಸಾಣೀಕೆರೆರಘುನಾಥ, ದೊಡ್ಡೇರಿಈರಣ್ಣ, ಬೆಳಗೆರೆಗಿರಿಜಮ್ಮ, ಮೈಲನಹಳ್ಳಿಮಾಲ, ರೇಣುಕಾಪುರಜಯಮ್ಮ, ಜಾಜೂರುಚಲುಮೇಶ್, ಓಬಳಾಪುರತಿಪ್ಪೇಸ್ವಾಮಿ, ಪಿ.ಮಹದೇವಪುರಪಾಂಡುರಂಗಪ್ಪ, ರಾಮಜೋಗಿಹಳ್ಳಿದೇವರಾಜ್ ಮುಂತಾದವರು ಪಾಲ್ಗೊಂಡಿದ್ದರು.

### ಉಪ ಲೋಕಾಯುಕ್ತ ಉಪನ್ಯಾಸ 23ಕ್ಕೆ

» **ದಾವಣಗೆರೆ**

ಕರ್ನಾಟಕ ಲೋಕಾಯುಕ್ತ, ಜಿಲ್ಲಾ ವಕೀಲರ ಸಂಘ, ದಾವಣಗೆರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 23ರ ಬುಧವಾರ ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿನ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಉಪನ್ಯಾನ ಮಾಲಿಕೆ ಸಾರ್ವಜನಿಕ ಆಡಳಿತ ಮತ್ತು ಲೋಕಾಯುಕ್ತ ಕಾಯ್ದೆ 1984ರ ಅಡಿಯಲ್ಲಿ ವಕೀಲರ ಪಾತ್ರ ಕುರಿತು ವಿಶೇಷ ಉಪನ್ಯಾಸ ಮಾಲಿಕೆ ನಡೆಯಲಿದೆ. ಕಾರ್ಯಕ್ರಮವನ್ನು ರಾಜ್ಯದ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಉದ್ಘಾಟಿಸುವರು. ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಡಿ.ಕೆ. ವೇಲಾ, ಲೋಕಾಯುಕ್ತ ಅಪರ ನಿಬಂಧಕರಾದ ಕೆ.ಎಂ.ರಾಜಶೇಖರ, ಎನ್.ವಿ.ಅರವಿಂದ, ವಿ.ಎನ್. ಮಿಲನ, ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ.ಮ.ಕರೆಣ್ಣವರ ಆಗಮಿಸಲಿದ್ದಾರೆ

### ವಿಶ್ವ ಮಲೇರಿಯಾ ಅಂಗವಾಗಿ ಜಾಥಾ

» **ದಾವಣಗೆರೆ**

ವಿಶ್ವ ಮಲೇರಿಯಾ ದಿನದ ಪ್ರಯುಕ್ತ ಏಪ್ರಿಲ್ 25 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಮಲೇರಿಯಾ ನಿಯಂತ್ರಣ ಕ್ರಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

### ಪ್ರವೇಶಕ್ಕಾಗಿ ಅರ್ಜಿ

» **ದಾವಣಗೆರೆ**

ಪ್ರಸಕ್ತ ಸಾಲಿಗೆ ಪ್ರತಿಭಾನ್ವಿತ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಿಗೆ 6 ನೇ ತರಗತಿಗೆ ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ದಾವಣಗೆರೆ ಜಿಲ್ಲೆ ವ್ಯಾಪ್ತಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ.3 ರೊಳಗಾಗಿ ವೆಬ್‌ಸೈಟ್ https://swd.karnataka.gov.in ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ದಾವಣಗೆರೆ ಹಾಗೂ ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರು ಸಂಪರ್ಕಿಸಿ.

**ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್ ಸೂಚನೆ**

# ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮವಹಿಸಿ

» **ಚಿತ್ರದುರ್ಗ**

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮವಹಿಸಬೇಕು ಹಾಗೂ ಸ್ವಚ್ಛ ಭಾರತ ಮಿಷನ್ (ಗ್ರಾಮೀಣ) ಯೋಜನೆಯ ಬೂದು ನೀರು ಮತ್ತು ಮಲತ್ಯಾಜ್ಯ ಸಂಸ್ಕರಣಾ ಘಟಕ, ಸಮಗ್ರ ಘನತ್ಯಾಜ್ಯ ನಿರ್ವಹಣಾ ಘಟಕದ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಜಲಜೀವನ್ ಮಿಷನ್ ಯೋಜನೆಯಡಿ ಅನುಷ್ಠಾನಗೊಂಡಿರುವ ಕಾಮಗಾರಿಗಳ ಪ್ರಗತಿ ಪರಿಶೀಲನೆ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮತ್ತು ಬೇಸಿಗೆಯಲ್ಲಿ ಕುಡಿಯುವ ನೀರು ತೊಂದರೆ ಇರುವ ಗ್ರಾಮಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಕುಡಿಯುವ ನೀರು ಸಮಸ್ಯೆ ತೀವ್ರವಾಗಿರುವ ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್ ಮಾಲೀಕರಿಂದ ಬಾಡಿಗೆ ಪಡೆದುಕೊಂಡು ಕುಡಿಯುವ ನೀರು ಪೂರೈಕೆ ಮಾಡಬೇಕು ಎಂದು ತಿಳಿಸಿದ ಅವರು, ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ಎಲ್ಲ ತಾಲ್ಲೂಕು ಪಂಚಾಯಿತಿಗಳಲ್ಲಿ ಸಹಾಯವಾಣಿ ತೆರೆಯುವಂತೆತಾ.ಪಂಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜಿ.ಪಂ.ಸಿಇಓ ಸೂಚನೆ ನೀಡಿದರು.ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಓವರ್ ಹೆಡ್ ಟ್ಯಾಂಕ್‌ಗಳ ಸ್ವಚ್ಛಗೊಳಿಸಿ, ಕ್ಲೋರಿನೇಷನ್ ಮಾಡಬೇಕು. ಈ ಕುರಿತು ಆರೋಗ್ಯ ಇಲಾಖೆ ಅಧಿಕಾರಿಗಳು ಮೇಲ್ವಿಚಾರಣೆ ನಡೆಸಬೇಕು. ಜವನಗೊಂಡನಹಳ್ಳಿ ಮತ್ತು ಹರ್ತಿಕೋಟೆ ಕುಡಿಯುವ ನೀರು ಯೋಜನೆಗಳ ಬಾಕಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ, ಟ್ರಯಲ್ ರನ್ ಮಾಡಬೇಕು ಎಂದು ಹೇಳಿದರು.

ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳು ಸಭೆಗಳನ್ನು ಆಯೋಜಿಸಿ, ನಡಾವಳಿ ಜಿಲ್ಲಾ ಪಂಚಾಯಿತಿಗೆ ಸಲ್ಲಿಸಬೇಕು. ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿ ನಿಗಧಿತ ಕಾಲಮಿತಿಯೊಳಗೆ ಬೂದು ನೀರು ಕಾಮಗಾರಿಗಳನ್ನು ಪೂರ್ಣಗೊಳಿಸಿ ಎಂದು ತಾಕೀತು ಮಾಡಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವಚ್ಛ ಸಂಕೀರ್ಣ ಘಟಕಗಳಲ್ಲಿ ಕಸ ಸಂಗ್ರಹಣೆ, ವಿಂಗಡಣೆ ಸಮರ್ಪಕವಾಗಿ ನಿರ್ವಹಿಸಲು ತಿಳಿಸಿದರು. ಜಿಲ್ಲೆಯ ಹಿರಿಯೂರು ತಾಲ್ಲೂಕಿನ ವಿ.ವಿ.ಪುರ ಗ್ರಾಮ ಪಂಚಾಯಿತಿಯಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ಪೂರ್ಣಗೊಂಡಿದ್ದು, ಟ್ರಯಲ್ ರನ್ ಮಾಡಲು ಸೂಚಿಸಿದರು. ಚಳ್ಳಕೆರೆ ತಾಲ್ಲೂಕಿನ ನಗರಂಗೆರೆ, ಮೊಳಕಾಲ್ಮುರು ತಾಲ್ಲೂಕಿನ ರಾಂಪುರ, ಹೊಳಲ್ಕೆರೆ ತಾಲ್ಲೂಕಿನ ಗುಂಡೇರಿ, ಚಿತ್ರದುರ್ಗ ತಾಲ್ಲೂಕಿನ ದ್ಯಾಮವ್ವನಹಳ್ಳಿ, ಹೊಸದುರ್ಗ ತಾಲ್ಲೂಕಿನ ಬೆಲಗೂರು ಗ್ರಾಮ ಪಂಚಾಯಿತಿಗಳಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ಸಿ.ಎಸ್.ಗಾಯಿತ್ರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್, ಜಿಲ್ಲಾ ಪಂಚಾಯಿತಿ ಸಹಾಯಕ ಯೋಜನಾಧಿಕಾರಿ ಡಿ.ಎಸ್.ಸುಮಾ, ಜಲಜೀವನ್ ಮಿಷನ್ ಯೋಜನೆಯ ಯೋಜನಾ ವ್ಯವಸ್ಥಾಪಕ ಮಂಜುನಾಥ ಎಸ್ ನಾಡರ್, ಐಇಸಿ ಸಮಾಲೋಚಕ ಬಿ.ಸಿ.ನಾಗರಾಜ್, ಹೆಚ್‌ಆರ್‌ಡಿ ಸಮಾಲೋಚಕ ವಿನಯ್ ಕುಮಾರ್, ಎಸ್.ಹೆಚ್ ಸಮಾಲೋಚಕ ಪ್ರಮೀಳಾ, ಎಂಐಎಸ್ ಸಮಾಲೋಚಕರಾದ ಶಶಿಧರ್ ಮತ್ತು ಸ್ನೇಹನ್ ಹಾಗೂ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳಾದ ಸತೀಶ್, ರವಿಕುಮಾರ್, ವಿಶ್ವನಾಥ್, ಸುನೀಲ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಿರಿಯ ಅಭಿಯಂತರು ಹಾಗೂ ಸಿಬ್ಬಂದಿ ಇದ್ದರು.

**ಸ್ತ್ರೀ ಶಕ್ತಿ ಸಂಘಗಳ ಒಕ್ಕೂಟದ ಪರಿವರ್ತನೆ ಸಭೆಯಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್**

# ಸಾಮಾಜಿಕ ಪಿಡುಗು ನಿವಾರಣೆಗೆ ಶ್ರಮಿಸಿ

» **ಚಿತ್ರದುರ್ಗ**

ಮಹಿಳಾ ದೌರ್ಜನ್ಯ, ಬಾಲ್ಯವಿವಾಹ, ಲಿಂಗ ತಾರತಮ್ಯ, ಅಪೌಷ್ಠಿಕತೆ ಮಕ್ಕಳ ಹಕ್ಕುಗಳ ಉಲ್ಲಂಘನೆ, ಬಾಲ ಕಾರ್ಮಿಕ ಪದ್ಧತಿ ಅಂತಹ ಸಾಮಾಜಿಕ ಪಿಡುಗುಗಳು ಕಡಿಮೆಯಾಗಿ ಗುಣಾತ್ಮಕ ಜೀವನ ಶೈಲಿ ನಿಮ್ಮದಾಗುವ ನಿಟ್ಟಿನಲ್ಲಿ ಒಕ್ಕೂಟವು ಕೆಲಸ ಮಾಡಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.



ಚಿತ್ರದುರ್ಗ ತಾಲ್ಲೂಕಿನ ಕಾಲ್ಗೆರೆ ಗ್ರಾಮದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಇಲಾಖೆ ವತಿಯಿಂದ ಶ್ರೀ ಗುಲಾಭಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟ ಸಹಯೋಗದೊಂದಿಗೆ ರಾಜ್ಯ ಜೀವನೋಪಾಯ ಅಭಿಯಾನದ ಕಾರ್ಯಕ್ರಮದಡಿಯಲ್ಲಿ ಸ್ತ್ರೀ ಶಕ್ತಿ ಸಂಘಗಳ ಒಕ್ಕೂಟದ ಪರಿವರ್ತನೆ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಎಲ್ಲಾ ಗ್ರಾಮಗಳಲ್ಲಿ ಸ್ತ್ರೀ ಶಕ್ತಿ ಸಂಘಗಳ ರಚನೆಯಾಗಿದೆ. ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಶ್ರೀ ಗುಲಾಭಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟಗಳ ಕಾರ್ಯನಿರ್ವಹಿಸುತ್ತಿವೆ. ಆದರೂ ಸಹ ಸಾಮಾಜಿಕ ಪರಿವರ್ತನೆ ಹೊಂದಿರುವ ಪ್ರಮಾಣ ಅತಿ ಕಡಿಮೆ ಎಂದು ಹೇಳಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ ಮಾತನಾಡಿ, ಗರ್ಭಿಣಿ ಆರೈಕೆ, ಬಾಣಂತಿ ಆರೈಕೆ, ಮಕ್ಕಳ ಆರೈಕೆ, ಅನೇಮಿಯ ಮುಕ್ತ ಭಾರತ ಸುರಕ್ಷಿತ ಮಾತೃತ್ವ ಅಭಿಯಾನ ಲಸಿಕಾ ಕಾರ್ಯಕ್ರಮ ಈ ಎಲ್ಲಾ ಕಾರ್ಯಗಳ ಸೇವೆಗಳ ಬಗ್ಗೆ ನಿಮ್ಮ ಒಕ್ಕೂಟದ ಸಭೆಗಳಲ್ಲಿ ಮಾತನಾಡಿ ಜಾಗೃತಿ ಮೂಡಿಸಬೇಕು. ಸರ್ಕಾರದ ಎಲ್ಲಾ ಸೇವೆಗಳ ಬಗ್ಗೆ ಚರ್ಚಿಸಬೇಕು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಕುಟುಂಬ ಕಲ್ಯಾಣ ಯೋಜನೆಗಳ ಅನುಷ್ಠಾನದಲ್ಲಿ ಪುರುಷರ ಸಹಭಾಗಿತ್ವ ಬರಬೇಕಾದರೆ ಸ್ತ್ರೀ ಶಕ್ತಿ ಸಂಘಗಳ ಒಕ್ಕೂಟ ಕುಟುಂಬ ಕಲ್ಯಾಣಕ್ಕೆ ಪರಿವರ್ತನೆ ಮಾಡಿ ಎಂದರು.ಪರಿವರ್ತನಾ ಸಭೆಯಲ್ಲಿ ಒಕ್ಕೂಟದ ಅಧ್ಯಕ್ಷರಾದ ನಿರ್ಮಲ, ಕಾರ್ಯದರ್ಶಿ ಗಿರಿಜಮ್ಮ, ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕ ಶ್ರೀನಿವಾಸ್, ಸದಸ್ಯರಾದ ಸುಜಾತ ಆರೋಗ್ಯ ಇಲಾಖೆಯ ಆಂಜನೇಯ, ಪ್ರವೀಣಕುಮಾರ್, ರಜಿಯಾಬೇಗಂ, ವಿನಯ್, ಸಿಂಧ್ಯಾ, ಆಶಾ ಕಾರ್ಯಕರ್ತೆ ಶಾರದಮ್ಮ, ಅಂಗನವಾಡಿ ಶಿಕ್ಷಕರಾದ ಸಾಕಮ್ಮ, ಹನುಮಕ್ಕ, ಎಲ್ಲಾ ಒಕ್ಕೂಟದ ಸದಸ್ಯರು ಉಪಸ್ಥಿತರಿದ್ದರು.

### ಮನೆಗಳಿಗೆ ವಿದ್ಯುತ್ ಸ್ಮಾರ್ಟ್ ಮೀಟರ್ ಅಳವಡಿಸಿದರೆ ಬೀದಿಗಿಳಿದು ಹೋರಾಟ: ಬಸವರೆಡ್ಡಿ




» **ಚಳ್ಳಕೆರೆ**

ಮನೆಗಳಿಗೆ ಹೊಸಡಿಜಿಟಲ್ ಸ್ಮಾರ್ಟ್ ಮೀಟರ್ ಅಳವಡಿಸುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ತಳಕು ಬೆಸ್ಕಾಂ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಬೇಡರೆಡ್ಡಿಹಳ್ಳಿ ಬಸವರೆಡ್ಡಿ, ರಾಜ್ಯ ಸರ್ಕಾರ ರೈತರಿಗೆ ಯಾವುದೇ ನೆರವು ನೀಡುತ್ತಿಲ್ಲ, ಬಿತ್ತನೆ ಸಂದರ್ಭದಲ್ಲಿ ರೈತರಿಗೆ ಗೊಬ್ಬರ ಬೀಜ ಸಿಗುತ್ತಿಲ್ಲ, ಸಿಕ್ಕರೂ ಕಳಪೆ ಬೀಜ, ಗೊಬ್ಬರವಾಗಿರುತ್ತದೆ. ಈ ಬಗ್ಗೆ ಸರ್ಕಾರಕ್ಕೆ ಯಾವುದೇ ಚಿಂತನೆ ಇಲ್ಲ, ಉಚಿತವಾಗಿ ವಿದ್ಯುತ್ ನೀಡುತ್ತೇವೆಂದು ಪ್ರಚಾರ ಪಡೆದ ಸರ್ಕಾರ ಈಗ ಹಣವನ್ನು ಪಡೆಯುವ ನಿಟ್ಟಿನಲ್ಲಿ ಮುಂದಾಗಿದೆ. ಪ್ರತಿಮನೆಗೂ ಸ್ಮಾರ್ಟ್‌ಮೀಟರ್ ಅಳವಡಿಸಿ ಅವರಿಂದ ಹಣ ಪಡೆದು ಮುಂದಿನ ದಿನಗಳಲ್ಲಿ ಇಡೀ ಬೆಸ್ಕಾಂ ಇಲಾಖೆಯನ್ನೇ ಖಾಸಗಿ ಒಡೆತನಕ್ಕೆ ಒಪ್ಪಿಸುವ ಷಡ್ಯಂತರ ನಡೆದಿದೆ. ಇದರ ವಿರುದ್ಧ ರೈತರು ಪ್ರತಿಭಟನೆ ನಡೆಸಿದ್ದಾರೆ, ಬೆಸ್ಕಾಂ ಮೀಟರ್ ಅಳವಡಿಸಲು ಮುಂದಾದಲ್ಲಿ ಬೀದಿಗಿಳಿದು ಹೋರಾಟ ನಡೆಸಲು ರೈತರ ಸಿದ್ಧವಿದೆ ಎಂದು ತಿಳಿಸಿದರಲ್ಲದೆ, ಮೀಟರ್ ಅಳವಡಿಸದಂತೆ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ಮನವಿ ನೀಡಿದರು.

ತಳಕು ಬೆಸ್ಕಾಂ ಎಇಇ ಮಮತ ಮನವಿ ಸ್ವೀಕರಿಸಿ ಮಾತನಾಡಿ, ರೈತರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಕೊಡುವ ಉದ್ದೇಶ ಬೆಸ್ಕಾಂ ಇಲಾಖೆಗೆ ಇಲ್ಲ, ಇಲಾಖೆಯ ನಿಯಮಗಳನ್ನು ಪಾಲಿಸಲು ರೈತ ಸಂಘ ಸಹಕಾರ ನೀಡಬೇಕೆಂದರು.

ರೈತ ಮುಖಂಡರಾದ ರವಿಕುಮಾರ್, ರಾಜಣ್ಣ, ಈರಣ್ಣ, ನಿಂಗಣ್ಣ, ಹಿರೇಹಳ್ಳಿತಿಪ್ಪೇಸ್ವಾಮಿ, ಮಂಜಣ್ಣ, ಗಂಗಾಧರ, ನರಸಿಂಹರೆಡ್ಡಿ, ವೆಂಕಟೇಶ್, ರಂಗಾರೆಡ್ಡಿ, ಸಣ್ಣತಿಪ್ಪೇಸ್ವಾಮಿ, ಚಂದ್ರಶೇಖರ್‌ನಾಯ್ಕ, ಮೀಟ್ಯಾನಾಯ್ಕ, ಓಬಯ್ಯ, ಜಯರಾಮ್‌ರೆಡ್ಡಿ, ಹನುಮಂತರೆಡ್ಡಿ, ಪ್ರಶಾಂತ್‌ರೆಡ್ಡಿ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

**ಪ್ರಮುಖ ಸುದ್ದಿ**

# ನಿಡುಮಾಮಿಡೇಶ್ವರಿ, ಕೊಲ್ಲಾಪುರದಮ್ಮ, ಆಂಜನೇಯಸ್ವಾಮಿ ಜಾತ್ರಾ ಮಹೋತ್ಸವ



» **ಚಿತ್ರದುರ್ಗ**

ಭೀಮಸಮುದ್ರ ಸಮೀಪವಿರುವ ವಿ.ಪಾಳ್ಯದಲ್ಲಿ ನಿಡುಮಾಮಿಡೇಶ್ವರಿ, ಕೊಲ್ಲಾಪುರದಮ್ಮ, ಆಂಜನೇಯಸ್ವಾಮಿಯ ಜಾತ್ರಾ ಮಹೋತ್ಸವ ಹಾಗೂ ನಾಲ್ಕನೆ ವರ್ಷದ ರಥೋತ್ಸವ ಶುಕ್ರವಾರ ವಿಜೃಂಭಣೆಯಿಂದ ನಡೆಯಿತು.

ಬಾಳೆಕಂದು, ಹೊಂಬಾಳೆ, ಮಲ್ಲಿಗೆ, ಸುಗಂಧರಾಜ, ಕನಕಾಂಬರ, ಸೇವಂತಿಗೆ, ಗುಲಾಬಿ, ಹಸಿರು ಪತ್ರೆ, ಬೃಹಧಾಕಾರವಾದ ಹಾರ ಹಾಗೂ ವಿವಿಧ ವರ್ಣಗಳ ಬಾವುಟಗಳಿಂದ ರಥವನ್ನು ಅಲಂಕರಿಸಲಾಗಿತ್ತು.

ನಿಡಮಾಮಿಡೇಶ್ವರಿ, ಆಂಜನೇಯ, ಕೊಲ್ಲಾಪುರದಮ್ಮ, ಕರಿಮಾರಮ್ಮ, ಯಲ್ಲಮ್ಮ, ಕುಕ್ಕುವಾಡೇಶ್ವರಿ, ದುರುಗಮ್ಮ ದೇವರುಗಳನ್ನು ವಿಶೇಷವಾಗಿ ಸಿಂಗರಿಸಿ ರಥದಲ್ಲಿ ಕೂರಿಸಿದ ನಂತರ ನೂರಾರು ಭಕ್ತರು ರಥವನ್ನು ಎಳೆದರು. ರಥೋತ್ಸವ ವೇಳೆಯಲ್ಲಿ ಜಮಾಯಿಸಿದ್ದ ಭಕ್ತರು ರಥದ ಕಳಸಕ್ಕೆ ಬಾಳೆಹಣ್ಣುಗಳನ್ನು ಎಸೆದು ಹರಕೆ ತೀರಿಸಿಕೊಂಡರು.

ರಥೋತ್ಸವಕ್ಕೆ ಆಗಮಿಸಿದ್ದ ಭಕ್ತರಿಗೆ ಅಲ್ಲಲ್ಲಿ ತಂಪಾದ ಮಜ್ಜಿಗೆಯನ್ನು ವಿತರಿಸಲಾಯಿತು.

ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಜಾತ್ರೆಯಲ್ಲಿ ಪಾಲ್ಗೊಂಡು ಭಕ್ತಿ ಸಮರ್ಪಿಸಿದರು.


ನಿಡುಮಾಮಿಡೇಶ್ವರಿ ದೇವಸ್ಥಾನ ಜೀರ್ಣೋದ್ಧಾರ ಸೇವಾ ಸಮಿತಿ ಅಧ್ಯಕ್ಷ ನವೀನ್‌ಕುಮಾರ್, ಜಂಟಿ ಕಾರ್ಯದರ್ಶಿ ಸ್ವಾಮಿ, ಖಜಾಂಚಿ ಕೃಷ್ಣಪ್ಪ, ವಿ.ಪಾಳ್ಯದ ಮುಖಂಡರುಗಳಾದ ಕೊಟ್ರೇಶಪ್ಪ, ಸತೀಶ್, ನಾಗಪ್ಪ, ಹನುಮಂತಪ್ಪ, ಕರಿಯಪ್ಪ, ಕೆಂಚವೀರಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಕೆ.ಎಸ್.ಜಯಪ್ರತಿಭಾ ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.


### ಜನಿವಾರ ದರಿಸಿದ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ನಿರಾಕರಣೆ: ಕಾನೂನು ಕ್ರಮಕ್ಕೆ ಮನವಿ



» **ಚಳ್ಳಕೆರೆ**

ಸಿಇಟಿ ಪರೀಕ್ಷೆ ವೇಳೆ ಬೀದರ್‌ನಲ್ಲಿ ಜನಿವಾರ ತಗೆಸಲು ಮುಂದಾದ ಮೇಲ್ವಿಚಾರಕರನ ಮೇಲೆ ಕ್ರಮ ಕೈಗೊಳ್ಳಬೇಕೆಂದು ತಾಲ್ಲೂಕು ಬ್ರಾಹ್ಮಣ ಸಂಘದಿಂದ ಶನಿವಾರ ತಹಶೀಲ್ದಾರ್‌ಗೆ ಮನವಿ ನೀಡಿದರು.ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್ ಗೌತಮ್, ರಾಜ್ಯ ಸಂಘದ ಸೂಚನೆಯಂತೆ ಪರೀಕ್ಷಾ ಮೇಲ್ವಿಚಾರಕರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅವಕಾಶ ನೀಡಬೇಕಂದು ಒತ್ತಾಯಿಸಿ ರಾಜ್ಯದ ಮುಖ್ಯಮಂತ್ರಿಗಳಿಗೆ ಲಿಖಿತಮನವಿಯನ್ನು ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಅರ್ಪಿಸಿದರು. ಜನಿವಾರ ತೆಗೆಯದ ವಿದ್ಯಾರ್ಥಿಗೆ ಮೇಲ್ವಿಚಾರಕರು ಮಾಡಿದ ಅಚಾತುರ್ಯ ಹಾಗೂ ಅವಮಾನದಿಂದ ನೊಂದ ಬ್ರಾಹ್ಮಣ ಸಮುದಾಯ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ರಘುನಾಥ ಸೂಚನೆಯಂತೆ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಘಟನೆಯನ್ನು ಪ್ರತಿಭಟಿಸಿ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರವನ್ನು ಒತ್ತಾಯಿಸುತ್ತಿದೆ.



"ಆಲೋಚಿಸುವುದನ್ನು ಕಾರ್ಯ ಗತಗೊಳಿಸುವುದು ಇನ್ನೂ ಕಷ್ಟದ ಕೆಲಸ. ಹಾಗಾಗಿ ತೀರಾ ವಿರಳವಾಗಿ ಅಪರೂಪವಾಗಿ ಕೆಲವರಷ್ಟೇ ಆ ಕೆಲಸ ಮಾಡುತ್ತಾರೆ "

ಇಲ್ಲಿ ಆಲೋಚನೆ ಎಂದರೆ ವಿಷಯಗಳ ಕುರಿತು ಆಳವಾದ ಚಿಂತನೆ ಎಂದು ಭಾವಿಸಬೇಕು. ಏಕೆಂದರೆ ಮೆದುಳಿರುವ ಆರೋಗ್ಯವಂತ ಎಲ್ಲರೂ ಒಂದಲ್ಲ ಒಂದು ರೀತಿಯಲ್ಲಿ ಯೋಚಿಸುತ್ತಲೇ ಇರುತ್ತಾರೆ. ಆದರೆ ಆ ಯೋಚನೆ ಎಷ್ಟು ಪರಿಣಾಮಕಾರಿ ಮತ್ತು ಉಪಯುಕ್ತ ಎಂಬುದು ಮುಖ್ಯವಾಗುತ್ತದೆ.


- **ಇಲ್ಲದವರ ನೋವನ್ನು ಅರಿಯಲಾಗದ ಸಾಹಿತ್ಯ,**
- **ಉಳ್ಳವರ ಕ್ರೌರ್ಯವನ್ನು ಖಂಡಿಸಲಾಗದ ಬರಹ,**
- **ಶೋಷಿತರ ಧ್ವನಿಯನ್ನು ಎತ್ತಿಹಿಡಿಯಲಾಗದ ಲೇಖನ,**
- **ಶೋಷಕರ ದೌರ್ಜನ್ಯ ಟೀಕಿಸಲಾಗದ ಪ್ರಬಂಧ,**

ಸಮಾನತೆಯನ್ನು ಮೂಡಿಸಲಾಗದ ಚರ್ಚೆ,

ಅಮಾನವೀಯತೆಯನ್ನು ಧಿಕ್ಕರಿಸಲಾಗದ ಕವಿತೆ, ಪರಿಸರ ನಾಶವನ್ನು ತಡೆಯಲಾಗದ ಕಥೆ, ಭ್ರಷ್ಟತೆಯನ್ನು ಹೋಗಲಾಡಿಸಲಾಗದ ಅಂಕಣಗಳು, ಸಂಬಂಧಗಳನ್ನು ಬೆಸೆಯಲಾಗದ ಕಾದಂಬರಿ,

ವಿಷವಿಕ್ಕುವ ಜನರನ್ನು ಗುರುತಿಸಲಾಗದ ಅಕ್ಷರಗಳು,

ಪ್ರೀತಿಯನ್ನು ಪ್ರೀತಿಸಲಾಗದ ಮನಸ್ಸುಗಳು,
ಮೌಲ್ಯಗಳನ್ನು ನಾಶ ಮಾಡುವ ಪದಗಳು,
ಇತರರ ಮನ ನೋಯಿಸುವ ವಾಕ್ಯಗಳು,
ಕಷ್ಟಗಳನ್ನು ನಿವಾರಿಸಲಾಗದ ಪ್ರವಚನಗಳು,
ದುಷ್ಟತನವನ್ನು ಮೆಟ್ಟಿ ನಿಲ್ಲದ ಭಾಷಣಗಳು,
ಭ್ರಮೆಗಳನ್ನು ಸೃಷ್ಟಿ ಮಾಡುವ ಹರಿಕಥೆಗಳು,
ಅವಾಸ್ತವಿಕ ಆದರ್ಶಗಳನ್ನು ತುಂಬುವ ಗ್ರಂಥಗಳು, ಮನಸ್ಸಿನ ದುಗುಡವನ್ನು ಕಡಿಮೆ ಮಾಡಲಾಗದ ಜ್ಞಾನ,
ಭಾವನೆಗಳನ್ನು ನಿಯಂತ್ರಿಸಲಾಗದ ಭಕ್ತಿ,
ಇವು ನಿಮ್ಮ ಅಭಿವ್ಯಕ್ತಿಯ ಮಾಧ್ಯಮಗಳಾದರೂ,




ಅದನ್ನು ವ್ಯಕ್ತಪಡಿಸುವ ಸ್ವಾತಂತ್ರ್ಯ ನಿಮಗಿದ್ದರೂ,
ಅದು ಕೇವಲ ನಿಮ್ಮ ಬುದ್ಧಿಯ ಪ್ರದರ್ಶನ, ಸ್ವಾರ್ಥದ ಪ್ರತಿಬಿಂಬ,
ಅಹಂನ ತೋರ್ಪಡೆ, ಅಂತರಾಳದ ಅಸಹಿಷ್ಣುತೆಯ ಪ್ರಕಟಣೆ,
ಪ್ರಶಸ್ತಿ, ಬಿರುದು ಬಾವಲಿಗಳ ಆಸೆ ಅಷ್ಟೆ.
ಮೇಲೆ ಹೇಳಿದ ಎಲ್ಲವೂ ವ್ಯಕ್ತಿಯ, ಸಮಾಜದ, ದೇಶದ, ವಿಶ್ವದ,

ಜೀವಪರ ಹಿತದೃಷ್ಟಿ ಹೊಂದಿದ್ದರೆ ಅದು ನಿಜಕ್ಕೂ, ನಿಸ್ವಾರ್ಥ ಹೃದಯಗಳ ಆತ್ಮಸಾಕ್ಷಿಯ ಪ್ರತಿಬಿಂಬ,

ಅದು ಸಾಧ್ಯವಾದದ್ದೇ ಆದರೆ, ನಿಮ್ಮ ವ್ಯಕ್ತಿತ್ವ, ಉತ್ಕೃಷ್ಟ ಮಟ್ಟದಲ್ಲಿದೆ ಎಂದೇ ಅರ್ಥ.

ಐನ್ಸ್ಟೈನ್ ಆಲೋಚನೆ ಎಂಬುದು ಸಾಧನೆ ಮತ್ತು ಮಾನವೀಯ ಮೌಲ್ಯಗಳ ಕುರಿತೇ ಹೇಳಿರಬೇಕು. ಏಕೆಂದರೆ ಈ ಜಗತ್ತು ಕಂಡ ಅತ್ಯಂತ ಬುದ್ದಿವಂತ ವ್ಯಕ್ತಿ ಎಂದು ಐನ್ಸ್ಟೈನ್ ಅವರನ್ನು ಕರೆಯಲಾಗುತ್ತದೆ. ಅವರು ಸದಾ ಪ್ರಗತಿಪರವಾಗಿಯೇ ಆಲೋಚಿಸುತ್ತಾರೆ.

ಇಂದುನಮ್ಮಸಮಾಜದಲ್ಲಿಆಲೋಚಿಸುವವರ ಸಂಖ್ಯೆ ಹೆಚ್ಚಾದರೆ ವ್ಯವಸ್ಥೆಯ ಗುಣಮಟ್ಟ ಮತ್ತು ನಮ್ಮ ಜೀವನಮಟ್ಟ ಹೆಚ್ಚಾಗುತ್ತದೆ. ದಯವಿಟ್ಟು ವಿಷಯ ಯಾವುದೇ ಇರಲಿ ಸಾಧ್ಯವಾದಷ್ಟು ಸೃಷ್ಟಿಯ ಮೂಲದಿಂದ ಸಮಗ್ರವಾಗಿ ಯೋಚಿಸಿ.

ಆ ಮೂಲಕ ನಿಮ್ಮ ನಿರ್ಧಾರ ಮತ್ತು ಅಭಿಪ್ರಾಯ ರೂಪಿಸಿಕೊಳ್ಳಿ.

ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳ ಬೆಳವಣಿಗೆಯಿಂದ ಕೇವಲ ಮಾಹಿತಿಗಳ ದಾಸರಾಗಿ ಸ್ವತಂತ್ರವಾಗಿ ಯೋಚಿಸುವುದನ್ನೇ ಮರೆತಿದ್ದೇವೆ. ಮತ್ತೆ ಅದು ನಿಮ್ಮಲ್ಲಿ ಅರ್ಥಪೂರ್ಣವಾಗಿ ಚಿಗುರೊಡೆಯಲಿ ಎಂದು ಆಶಿಸುತ್ತಾ...... ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಗೃಹರಕ್ಷಕ ಸ್ವಯಂ ಸೇವಕ ಸ್ಥಾನಗಳ ಭರ್ತಿಗೆ ಅರ್ಜಿ

» **ಬಳ್ಳಾರಿ**

ಜಿಲ್ಲೆಯ ಸಂಡೂರು, ಸಿರುಗುಪ್ಪ, ಕುರುಗೋಡು, ಕುಡುತಿನಿ, ತೆಕ್ಕಲಕೋಟೆ, ಮತ್ತು ತೋರಣಗಲ್ಲು ಘಟಕಗಳಲ್ಲಿ ಖಾಲಿ ಇರುವ ಗೃಹರಕ್ಷಕರ ಸ್ವಯಂಸೇವಕ ಸ್ಥಾನಗಳನ್ನು ಭರ್ತಿ ಮಾಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಏ.17 ರಿಂದ 29 ರ ವರೆಗೆ ಬೆಳಿಗ್ಗೆ 9 ಗಂಟೆಯಿಂದ 12 ಗಂಟೆಯವರೆಗೆ ಮಾತ್ರ ನೀಡಲಾಗುವುದು (ರಜಾ ದಿನಗಳನ್ನು ಹೊರತು ಪಡಿಸಿ). ಅರ್ಜಿಗಳನ್ನು ಉಚಿತವಾಗಿ ನೀಡಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ಏ.29 ರ ಮಧ್ಯಾಹ್ನ 01 ಗಂಟೆ ಒಳಗೆ ಖುದ್ದಾಗಿ ಕಚೇರಿಗೆ ಸಲ್ಲಿಸಬಹುದು. ವಿದ್ಯಾರ್ಹತೆಯು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಯ ವಯಸ್ಸು 19 ವರ್ಷಗಳು ತುಂಬಿರಬೇಕು ಹಾಗೂ 40 ವರ್ಷಗಳು ಮೀರಿರಬಾರದು. ಸಂಡೂರು, ಕುಡುತಿನಿ, ತೆಕ್ಕಲಕೋಟೆ, ತೋರಣಗಲ್ಲು, ಕುರುಗೋಡು ಮತ್ತು ಸಿರುಗುಪ್ಪ ಘಟಕಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಆಯಾ ಘಟಕದ 10 ಕಿ.ಮೀ. ವ್ಯಾಪ್ತಿಯೊಳಗೆ ವಾಸವಾಗಿರಬೇಕು. ಈ ಬಗ್ಗೆ ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಮತ್ತು ಪಡಿತರ ಚೀಟಿಯಲ್ಲಿ ಸ್ಥಳೀಯ ವಿಳಾಸದ ಮಾಹಿತಿ ಹೊಂದಿರಬೇಕು. ಜನ್ಮ ದಿನಾಂಕಕ್ಕೆ ಸಂಬಂಧಿಸಿದಂತೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಮತ್ತು ವರ್ಗಾವಣೆ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿಯನ್ನು ಲಗತ್ತಿಸುವುದು. ಆಯ್ಕೆ ವಿಧಾನ ದೈಹಿಕ ಸಾಮರ್ಥ್ಯ, ಮೌಖಿಕ ಸಂದರ್ಶನ ಕೈಗೊಳ್ಳಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.7975872247 ಮತ್ತು ದೂ.08392–276421ಗೆ ಸಂಪರ್ಕಿಸಬಹುದು.

### ಧಾರ್ಮಿಕ ಪರಿವರ್ತನೆಯ ಶ್ರೇಷ್ಠ ಹರಿಕಾರ ಸಂತ ಶ್ರೀದೇವರದಾಸಿಮಯ್ಯ

## ಪ್ರತಿಯೊಬ್ಬ ವ್ಯಕ್ತಿಯ ಘನತೆ, ಗೌರವ ಸಂರಕ್ಷಣೆ ಮಾಡುವ ನೇಕಾರರ ಕಾರ್ಯ ಸ್ಮರಣೆಯ: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

12ನೇ ಶತಮಾನ ಧಾರ್ಮಿಕ ಪರಿವರ್ತನೆಯ ಪರ್ವಕಾಲವಾಗಿದೆ, ನೇಕಾರ ಸಂತ ಶ್ರೀದೇವರದಾಸಿಮಯ್ಯ ಸೇರಿದಂತೆ ಹಲವಾರು ಮಹಾನೀಯರು ಸಮಾಜದಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವಲ್ಲಿ ಸಫಲರಾದರು. ಇಡೀ ಸಮಾಜ ಅವರ ಮಾರ್ಗದರ್ಶನಕ್ಕೆ ಗೌರವ ನೀಡಿ ಸಮಾಜ ಕಟ್ಟುವ ಕಾರ್ಯಕ್ಕೆ ಸಹಕಾರ ನೀಡಿದರು. ಪ್ರತಿಯೊಬ್ಬ ವ್ಯಕ್ತಿಯ ಘನತೆ, ಗೌರವವನ್ನು ಕಾಪಾಡುವ ನೇಕಾರ ಸಮಾಜದಕಾರ್ಯವನ್ನು ಪ್ರಶಂಸಿಸುವುದಾಗಿ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿನಿಗಮ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಶನಿವಾರ ಸಂಜೆ ನೇಕಾರರ ಸಮುದಾಯಗಳ ಒಕ್ಕೂಟದಿಂದ ಹಮ್ಮಿಕೊಂಡಿದ್ದ ದೇವರದಾಸಿಮಯ್ಯ ಜಯಂತಿ ಕಾರ್ಯಕ್ರಮವನ್ನು ಚರಕದಲ್ಲಿ ನೂಲುತೆಗೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕಿನ



ಪದ್ಮಸಾಲಿ, ಪಟ್ಟಸಾಲೆ, ಕುರಹಿನಶೆಟ್ಟಿ, ಸ್ವಕುಳಸಾಳಿ, ದೇವಾಂಗ ಹಾಗೂ ತೊಗಟವೀರ ಸಮಾಜದ ಬಂಧುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮಕ್ಕೂ ಮುನ್ನ ನಗರದ ಶ್ರೀವೀರಭದ್ರಸ್ವಾಮಿ ದೇವಸ್ಥಾನದಿಂದ ಬೃಹತ್ ಮೆರವಣಿಗೆಯನ್ನು ನೇಕಾರ ಸಮುದಾಯ ಹಮ್ಮಿಕೊಂಡಿತ್ತು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಖಿಲಕರ್ನಾಟಕ ಪಟ್ಟಸಾಲೆ ನೇಕಾರರ ಸಂಘದ ರಾಜ್ಯಾಧ್ಯಕ್ಷ ಎಚ್.ತಿಪ್ಪೇಸ್ವಾಮಿ, ನೇಕಾರ ಸಮುದಾಯ ತನ್ನದೇಯಾದ ವಿಶೇಷತೆಯನ್ನು ಹೊಂದಿದೆ. ನೂರಾರು ವರ್ಷಗಳಿಂದ ಬಟ್ಟೆ ನೇಯುವ ಮೂಲಕ ಅವುಗಳನ್ನು ಸರ್ವರಿಗೂ ಯಾವುದೇ ಜಾತಿಬೇದವಿಲ್ಲದೆ ವಿತರಿಸಿ ಪ್ರತಿಯೊಬ್ಬರ ಗೌರವಕ್ಕೆ ಕುಂದುಬಾರದಾಗೆ ಜಾಗ್ರತೆ ವಹಿಸಿದೆ. ಇಂತಹ ಸಮಾಜದ ಜಾಗೃತಿ ಸಮಾಜದ ಮುಂದಾಗಬೇಕಿದೆ. ಇತ್ತೀಚಿಗೆ ಸರ್ಕಾರ ಪ್ರಕಟಿಸಿ ಜಾತಿಗಣನೆಯಲ್ಲಿ ನೇಕಾರ ಸಮುದಾಯಕ್ಕೆ ಅನ್ಯಾಯವಾಗಿದೆ ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಹೊಳಲ್ಕೆರೆ ಕ್ಷೇತ್ರದ ಶಾಸಕ ಎಂ.ಚಂದ್ರಪ್ಪ,ನೇಕಾರಸಮುದಾಯದವರು ಪ್ರೀತಿ, ವಿಶ್ವಾಸಗೌರವಕ್ಕೆ ಒತ್ತು ನೀಡುತ್ತಾರೆ. ಪ್ರತಿಯೊಬ್ಬ ವ್ಯಕ್ತಿಯಲ್ಲೂ ಆತ್ಮವಿಶ್ವಾಸ ಹುಟ್ಟಿಸುವ ಕಾರ್ಯ ಮಾಡುತ್ತಾ ಬಂದಿದ್ದಾರೆ.

ನೂರಾರು ವರ್ಷಗಳ ಕುಲಕಸುಬು ನೇಕಾರಿಕೆಯನ್ನುನಂಬಿಬದುಕುಕಟ್ಟಿಕೊಂಡ ಜನ ಇವರು ಇಂದಿಗೂ ರಾಜ್ಯದಲ್ಲಿ ಲಕ್ಷಾಂತರ ನೇಕಾರರು ನೇಕಾರಿಕೆಯನ್ನು ಅವಲಂಬಿಸಿದ್ದಾರೆ. ನೇಕಾರ ಸಮಾಜದ ಸಮಸ್ಯೆಗಳಿಗೆ ಸದಾಸ್ಪಂದಿಸುವ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿನಗರಸಭೆಅಧ್ಯಕ್ಷೆಆರ್.ಮಂಜುಳಾ, ಉಪಾಧ್ಯಕ್ಷೆಸುಮ, ನೇಕಾರ ಸಮುದಾಯದ ಒಕ್ಕೂಟದ ತಾಲ್ಲೂಕು ಅಧ್ಯಕ್ಷ ಆರ್.ಜಯರಾಮ್, ಸಹಪ್ರಾಧ್ಯಾಪಕ ಪ್ರೊ.ಎಸ್.ಬಿ.ಶಿವಪ್ರಸಾದ್, ನಗರಸಭಾ ಸದಸ್ಯ ವಿ.ವೈ.ಪ್ರಮೋದ್, ಗ್ರಾಪಂ ಸದಸ್ಯರಾದ ಕೆ.ಜೆ.ತಿಪ್ಪೇಸ್ವಾಮಿ, ಜಿ.ಗೌರಮ್ಮ, ಭಾಗ್ಯಮ್ಮ, ಜಯಮ್ಮ, ಎಚ್.ಸಿಂಧು, ರಾಮುಲುವೆಂಕಟೇಶ್, ಸಮಾಜದ ಮುಖಂಡ ಮ್ಯಾಡಂಶಿವಮೂರ್ತಿ, ಪದ್ಮಸಾಲಿ ಸಮಾಜದ ಅಧ್ಯಕ್ಷ ಎಚ್.ರವಿಕುಮಾರ್, ಪಟ್ಟಸಾಲೆ ನೇಕಾರ ಸಂಘದ ಎಂ.ಬಿ.ಗುರುಮೂರ್ತಿ, ಕುರಿಹಿನಶೆಟ್ಟಿ ಅಧ್ಯಕ್ಷ ಈ.ಶ್ರೀನಿವಾಸಲು, ಸ್ವಕುಳಸಾಲಿ ಅಧ್ಯಕ್ಷ ಭಾಸ್ಕರಾವ್‌ಗಾಯಕವಾಡ್, ದೇವಾಂಗ ಸಮಾಜದ ಅಧ್ಯಕ್ಷ ಎಂ.ಆರ್.ವೆಂಕಟೇಶ್, ಯುವಮುಖಂಡ ಡಿ.ಮಂಜುನಾಥ, ಎಂ.ಎನ್.ಕುಮಾರ್, ಜಿ.ಜೆ.ಸತ್ಯನಾರಾಯಣ, ಕೆ.ಸಿ.ವೀರೇಶ್, ಡಿ.ಶಿವಪ್ರಸಾದ್, ಬೆಸ್ಕಾಂ ಇಂಜಿನಿಯರ್ ಜಿ.ಶಿವಪ್ರಸಾದ್ ಮುಂತಾದವರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T